**2018ರ ಕರ್ನಾಟಕ ಅಧಿನಿಯಮ ಸಂಖ್ಯೆ: 08**
**ಬನವಾಸಿ ಅಭಿವೃದ್ಧಿ ಪ್ರಾಧಿಕಾರ ಅಧಿನಿಯಮ, 2018**
**ಪ್ರಕರಣಗಳ ಪಟ್ಟಿ**

**ಪ್ರಕರಣಗಳು**

**ಅಧ್ಯಾಯ – I**
**ಪ್ರಾರಂಭಿಕ**


1. ಸಂಕ್ಷಿಪ್ತ ಹೆಸರು, ವ್ಯಾಪ್ತಿ ಮತ್ತು ಪ್ರಾರಂಭ
2. ಪರಿಭಾಷೆಗಳು


**ಅಧ್ಯಾಯ – II**
**ಪ್ರಾಧಿಕಾರ ಮತ್ತು ಅದರ ಉದ್ಯೋಗಿಗಳು**


3. ಪ್ರಾಧಿಕಾರದ ರಚನೆ.
4. ಪದಾವಧಿ ಮತ್ತು ಸೇವಾ ಷರತ್ತುಗಳು.
5. ಸದಸ್ಯತ್ವದ ಪದಕ್ಕೆ ಅನರ್ಹತೆಗಳು
6. ಸದಸ್ಯನನ್ನು ತೆಗೆದು ಹಾಕುವುದು.
7. ಮರು ನೇಮಕಾತಿಗೆ ಅರ್ಹತೆ.
8. ಪ್ರಾಧಿಕಾರದ ಅಧಿಕಾರಗಳು.
9. ಪ್ರಾಧಿಕಾರದ ಉಪ ಸಮಿತಿ
10. ಆಯುಕ್ತನ ನೇಮಕಾತಿ
11. ಆಯುಕ್ತನ ಅಧಿಕಾರಗಳು ಮತ್ತು ಕರ್ತವ್ಯಗಳು.
12. ಪ್ರಾಧಿಕಾರದ ನೌಕರರು
13. ಪ್ರಾಧಿಕಾರದ ಅಡಿಯಲ್ಲಿನ ಸೇವೆಗಳಿಗಾಗಿ ಸಾಮಾನ್ಯ ಅನರ್ಹತೆ
14. ಪ್ರಾಧಿಕಾರದ ಸಭೆಗಳು
15. ವ್ಯವಹರಣೆಗಳು ಸರಿಯಾದುದೆಂದು ಮತ್ತು ಸಿಂಧುವೆಂದು ಪೂರ್ವಭಾವನೆ ಮಾಡುವುದು
16. ಪರಿಚಲನೆಯ ಮೂಲಕ ಪ್ರಾಧಿಕಾರದ ತೀರ್ಮಾನಗಳನ್ನು ಸೂಚಿಸುವುದು.
17. ಕೆಲವು ತೀರ್ಮಾನಗಳನ್ನು ಕೈಗೊಳ್ಳಲು ಅಧ್ಯಕ್ಷನ ಅಧಿಕಾರ.


**ಅಧ್ಯಾಯ – III**


18. ಪಾರಂಪರಿಕ ತಾಣಗಳು
19. ಅನುಸೂಚಿಯನ್ನು ತಿದ್ದುಪಡಿ ಮಾಡುವ ಅಧಿಕಾರ
20. ಅಭಿವೃದ್ಧಿ ಯೋಜನೆಯನ್ನು ಸಿದ್ಧಪಡಿಸುವುದು, ಅದರ ಅನುಮೋದನೆ ಹಾಗೂ ಅದನ್ನು ಕಾರ್ಯಗತಗೊಳಿಸುವುದು
21. ಬನವಾಸಿ ಪಾರಂಪರಿಕ ತಾಣಗಳ ನಿರ್ವಹಣೆ
22. ಪ್ರಾಧಿಕಾರಕ್ಕೆ ರಾಜ್ಯ ಸರ್ಕಾರದ ಅಧಿಕಾರಗಳ ಪ್ರತ್ಯಾಯೋಜನೆ
23. ಕರ್ನಾಟಕ ಸಾರ್ವಜನಿಕ ಆವರಣಗಳ (ಅನಧಿಕೃತ ಅಧಿಭೋಗದಾರರನ್ನು ಹೊರಹಾಕುವ) ಅಧಿನಿಯಮ, 1974ನ್ನು ಪ್ರಾಧಿಕಾರದ ಆವರಣಗಳಿಗೆ ಅನ್ವಯಿಸುವುದು
24. ಪ್ರವಾಸೋದ್ಯಮಕ್ಕೆ ಮತ್ತು ಯಾತ್ರೆ ಕೈಗೊಳ್ಳುವುದಕ್ಕೆ ಪ್ರಾಧಿಕಾರವು ಉತ್ತೇಜನ ನೀಡುವುದು
25. ಅಧಿಕಾರಗಳ ಪ್ರತ್ಯಾಯೋಜನೆ


**ಅಧ್ಯಾಯ – IV**
**ಹಣಕಾಸು ಮತ್ತು ಸ್ವತ್ತು**


26. ಪ್ರಾಧಿಕಾರದ ನಿಧಿ
27. ನಿಧಿಯ ಬಳಕೆ
28. ರಾಜ್ಯ ಸರ್ಕಾರದಿಂದ ಅನುದಾನ.

29. ಪ್ರಾಧಿಕಾರದ ಆಯವ್ಯಯ
30. ಲೆಕ್ಕಪತ್ರಗಳು ಮತ್ತು ಲೆಕ್ಕಪರಿಶೋಧನೆ.
31. ವರದಿಗಳು.

**ಅಧ್ಯಾಯ – V**
**ಸಂಕೀರ್ಣ**

32. ಪ್ರಾಧಿಕಾರವು ಅದರ ಅಧಿಕಾರ ವ್ಯಾಪ್ತಿಯೊಳಗಿನ ಯಾವುದೇ ಜಮೀನನ್ನು ಮಾರಾಟ ಮಾಡಕೂಡದು
33. ಕೆಲವು ವ್ಯಕ್ತಿಗಳು ಲೋಕನೌಕರರಾಗಿರತಕ್ಕದ್ದು
34. ಈ ಅಧಿನಿಯಮದ ಅಡಿ ಸದ್ಭಾವನೆಯಿಂದ ಕೈಗೊಂಡ ಕ್ರಮಕ್ಕೆ ರಕ್ಷಣೆ.
35. ಕರ್ತವ್ಯ ನಿರ್ವಹಣೆಯಲ್ಲಿ ಲೋಪ.
36. ಪ್ರಾಧಿಕಾರದ ವಿಘಟನೆ.
37. ರಾಜ್ಯ ಸರ್ಕಾರದಿಂದ ಆಡಳಿತಾತ್ಮಕ ನಿಯಂತ್ರಣ.
38. ನಿರ್ದೇಶನಗಳನ್ನು ನೀಡುವುದಕ್ಕೆ ರಾಜ್ಯ ಸರ್ಕಾರದ ಅಧಿಕಾರಗಳು.
39. ತೊಂದರೆಗಳ ನಿವಾರಣೆ.
40. ನಿಯಮಗಳ ರಚನಾಧಿಕಾರ.
41. ವಿನಿಯಮಗಳ ರಚನಾಧಿಕಾರ.
**ಅನುಸೂಚಿ**

## ಉದ್ದೇಶಗಳು ಮತ್ತು ಕಾರಣಗಳ ಹೇಳಿಕೆ

**I**

**2018ರ ಅಧಿನಿಯಮ ಸಂಖ್ಯೆ 08.–** ಬನವಾಸಿಯು ಕನ್ನಡದ ಆದಿ ಕವಿ ಪಂಪನ ಜನ್ಮ ಸ್ಥಳವಾಗಿದೆ ಮತ್ತು ಅದು ಕನ್ನಡದ ರಾಜರು ಆಳಿದ ಮೊದಲ ಸ್ವತಂತ್ರ ರಾಜ್ಯವಾಗಿದೆ ಹಾಗೂ ಕದಂಬರ ರಾಜಧಾನಿಯಾಗಿದೆ. ಆದುದರಿಂದ, ಉತ್ತರ ಕನ್ನಡ ಜಿಲ್ಲೆಯ ಸಿರ್ಸಿ ತಾಲ್ಲೂಕಿನ ಬನವಾಸಿಯಲ್ಲಿ ಮತ್ತು ಸುತ್ತಮುತ್ತಲಲ್ಲಿ ಇರುವ ಪಾರಂಪರಿಕ ಪ್ರದೇಶವನ್ನು ಅಂತರಾಷ್ಟ್ರೀಯ ಯಾತ್ರಾ ಸ್ಥಳವನ್ನಾಗಿ ಹಾಗೂ ಸಾಂಸ್ಕೃತಿಕ ಮತ್ತು ಪ್ರವಾಸೋದ್ಯಮ ಕೇಂದ್ರವನ್ನಾಗಿ ಅಭಿವೃದ್ಧಿಪಡಿಸಲು ಮತ್ತು ನಿರ್ವಹಿಸಲು ಒಂದು ಪ್ರಾಧಿಕಾರವನ್ನು ರಚಿಸುವುದು ಅವಶ್ಯಕವೆಂದು ಪರಿಗಣಿಸಲಾಗಿದೆ.

ಆದ್ದರಿಂದ ಈ ವಿಧೇಯಕ.

(2018ರ ವಿಧಾನಸಭೆಯ ವಿಧೇಯಕ ಸಂಖ್ಯೆ 64, ಕಡತ ಸಂಖ್ಯೆ:ಸಂವ್ಯಶಾಇ 47 ಶಾಸನ 2017)
(ಭಾರತ ಸಂವಿಧಾನದ 7ನೇ ಅನುಸೂಚಿಯ 2ನೇ ಪಟ್ಟಿಯ 5 ಮತ್ತು 32ನೇ ಹಾಗೂ 3ನೇ ಪಟ್ಟಿಯ 40ನೇ ನಮೂದನೆಯಡಿಯಲ್ಲಿ ಬರುತ್ತದೆ.)

**II**

**2025ರ ಅಧಿನಿಯಮ ಸಂಖ್ಯೆ: 54** ಮುಖ್ಯಮಂತ್ರಿ ಅಥವಾ ಕಂದಾಯ ಮಂತ್ರಿ ಅಥವಾ ಮುಖ್ಯ ಮಂತ್ರಿಯವರು ಆಯ್ಕೆ ಮಾಡಿದ ಯಾವುದೇ ಇತರ ಮಂತ್ರಿಯವರು ಬನವಾಸಿ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾಗುವ ಕುರಿತಾದ ಉಪಬಂಧವನ್ನು ಪರಿಷ್ಕರಿಸಲು, ಬನವಾಸಿ ಅಭಿವೃದ್ಧಿ ಪ್ರಾಧಿಕಾರ ಅಧಿನಿಯಮ, 2018 (2018ರ ಕರ್ನಾಟಕ ಅಧಿನಿಯಮ ಸಂಖ್ಯೆ: 08)ನ್ನು, ತಿದ್ದುಪಡಿ ಮಾಡುವುದು ಅವಶ್ಯಕವೆಂದು ಪರಿಗಣಿಸಿದೆ.

ಆದ್ದರಿಂದ ಈ ವಿಧೇಯಕ.

[2025ರ ವಿಧಾನ ಸಭೆಯ ವಿಧೇಯಕ ಸಂಖ್ಯೆ: 40, ಕಡತ ಸಂಖ್ಯೆ:ಸಂವ್ಯಶಾಇ 42 ಶಾಸನ 2025]
[ಭಾರತ ಸಂವಿಧಾನದ 7ನೇ ಅನುಸೂಚಿಯ 2ನೇ ಪಟ್ಟಿಯ 5 ಮತ್ತು 32ನೇ ನಮೂದನೆಯಡಿ ಬರುತ್ತದೆ.]

[ಕರ್ನಾಟಕ ರಾಜ್ಯ ಪತ್ರದ ಭಾಗ IVಎ ವಿಶೇಷ ರಾಜ್ಯ ಪತ್ರಿಕೆ ಸಂಖ್ಯೆ:564, ದಿನಾಂಕ:10.09.2025 ರಲ್ಲಿ ಪ್ರಕಟಗೊಂಡಿದೆ]

**2018ರ ಕರ್ನಾಟಕ ಅಧಿನಿಯಮ ಸಂಖ್ಯೆ: 08**

(2018ರ ಮಾರ್ಚ್ ತಿಂಗಳ ಒಂಭತ್ತನೇ ದಿನಾಂಕದಂದು ಕರ್ನಾಟಕ ರಾಜ್ಯ ಪತ್ರದ ವಿಶೇಷ ಸಂಚಿಕೆಯಲ್ಲಿ ಮೊದಲು ಪ್ರಕಟವಾಗಿದೆ)

# ಬನವಾಸಿ ಅಭಿವೃದ್ಧಿ ಪ್ರಾಧಿಕಾರ ಅಧಿನಿಯಮ, 2018

(2018ರ ಮಾರ್ಚ್ ತಿಂಗಳ ಏಳನೇ ದಿನಾಂಕದಂದು ರಾಜ್ಯಪಾಲರಿಂದ ಅನುಮತಿಯನ್ನು ಪಡೆಯಲಾಗಿದೆ)

(2025ರ ಅಧಿನಿಯಮ ಸಂಖ್ಯೆ:54ರ ಮೂಲಕ ತಿದ್ದುಪಡಿಯಾದಂತೆ)

ಉತ್ತರ ಕನ್ನಡ ಜಿಲ್ಲೆಯ ಶಿರಸಿ ತಾಲ್ಲೂಕಿನ ಬನವಾಸಿ ಮತ್ತು ಅದರ ಸುತ್ತಮುತ್ತ ಇರುವ ಪಾರಂಪರಿಕ ತಾಣಗಳ ಅಭಿವೃದ್ಧಿ ಮತ್ತು ನಿರ್ವಹಣೆಗಾಗಿ ಒಂದು ಪ್ರಾಧಿಕಾರವನ್ನು ಸ್ಥಾಪಿಸುವುದಕ್ಕಾಗಿ ಉಪಬಂಧ ಕಲ್ಪಿಸಲು ಒಂದು ಅಧಿನಿಯಮ.

ಉತ್ತರ ಕನ್ನಡ ಜಿಲ್ಲೆಯ ಶಿರಸಿ ತಾಲ್ಲೂಕಿನ ಬನವಾಸಿ ಮತ್ತು ಅದರ ಸುತ್ತಮುತ್ತ ಇರುವ ಪಾರಂಪರಿಕ ತಾಣಗಳನ್ನು ಅಂತರರಾಷ್ಟ್ರೀಯ ಯಾತ್ರಾ ಸ್ಥಳವನ್ನಾಗಿ, ಸಾಂಸ್ಕೃತಿಕ ಮತ್ತು ಪ್ರವಾಸ ಕೇಂದ್ರವನ್ನಾಗಿ ಅಭಿವೃದ್ಧಿಪಡಿಸಲು ಮತ್ತು ಅದನ್ನು ನಿರ್ವಹಿಸಲು ಹಾಗೂ ಅದಕ್ಕೆ ಸಂಬಂಧಿಸಿದ ಅಥವಾ ಅದಕ್ಕೆ ಪ್ರಾಸಂಗಿಕವಾದ ವಿಷಯಗಳಿಗಾಗಿ ಒಂದು ಪ್ರಾಧಿಕಾರವನ್ನು ಸ್ಥಾಪಿಸಲು ಉಪಬಂಧ ಕಲ್ಪಿಸುವುದು ಯುಕ್ತವಾಗಿರುವುದರಿಂದ;

ಇದು ಭಾರತ ಗಣರಾಜ್ಯದ ಅರವತ್ತೊಂಬತ್ತನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗತಕ್ಕದ್ದು.

## ಅಧ್ಯಾಯ – I
## ಪ್ರಾರಂಭಿಕ

**1. ಸಂಕ್ಷಿಪ್ತ ಹೆಸರು, ವ್ಯಾಪ್ತಿ ಮತ್ತು ಪ್ರಾರಂಭ.–** (1) ಈ ಅಧಿನಿಯಮವನ್ನು ಬನವಾಸಿ ಅಭಿವೃದ್ಧಿ ಪ್ರಾಧಿಕಾರ ಅಧಿನಿಯಮ, 2018 ಎಂದು ಕರೆಯತಕ್ಕದ್ದು.

(2) ಇದು 2ನೇ ಪ್ರಕರಣದ (ಸಿ) ಖಂಡದಲ್ಲಿ ಪರಿಭಾಷಿಸಿದಂತೆ ಉತ್ತರ ಕನ್ನಡ ಜಿಲ್ಲೆಯ ಶಿರಸಿ ತಾಲ್ಲೂಕಿನ ಬನವಾಸಿ ಪ್ರದೇಶಕ್ಕೆ ಮತ್ತು ಇತರ ಪಾರಂಪರಿಕ ತಾಣಗಳಿಗೆ ವ್ಯಾಪ್ತವಾಗತಕ್ಕದ್ದು.

(3) ಇದು, ರಾಜ್ಯ ಸರ್ಕಾರವು, ಅಧಿಸೂಚನೆಯ ಮೂಲಕ ಗೊತ್ತುಪಡಿಸಬಹುದಾದಂಥ [1][ದಿನಾಂಕದಿಂದ][1] ಜಾರಿಗೆ ಬರತಕ್ಕದ್ದು ಮತ್ತು ಅಧಿನಿಯಮದ ಬೇರೆಬೇರೆ ಉಪಬಂಧಗಳಿಗೆ ಬೇರೆಬೇರೆ ದಿನಾಂಕಗಳನ್ನು ಗೊತ್ತುಪಡಿಸಬಹುದು.

1. ಈ ಅಧಿನಿಯಮವು ಅಧಿಸೂಚನೆ ಸಂಖ್ಯೆ: ಕಂಇ 148 ಆರ್‌ಇಹೆಚ್ 2015 (ಭಾಗ–1) ದಿ:13.08.2018ರ ಮೂಲಕ ದಿ:15.08.2018ರಿಂದ ಜಾರಿಗೆ ಬಂದಿದೆ

**2. ಪರಿಭಾಷೆಗಳು.–** ಈ ಅಧಿನಿಯಮದಲ್ಲಿ, ಸಂದರ್ಭವು ಅನ್ಯಥಾ ಅಗತ್ಯಪಡಿಸಿದ ಹೊರತು,–

(ಎ) **"ಸೌಕರ್ಯ"** ಎಂಬುದರಲ್ಲಿ ರಸ್ತೆ, ಬೀದಿಗಳು, ಸುರಂಗ ಮಾರ್ಗಗಳು, ದೀಪದ ವ್ಯವಸ್ಥೆ, ಚರಂಡಿ ವ್ಯವಸ್ಥೆ, ನೈರ್ಮಲೀಕರಣ, ವಿದ್ಯುಚ್ಛಕ್ತಿ ಮತ್ತು ನೀರು ಸರಬರಾಜು ಅಥವಾ ಇತರ ಅನುಕೂಲತೆಗಳು, ಲೋಕೋಪಯೋಗಿ ಕಾಮಗಾರಿಗಳು, ಮಾರುಕಟ್ಟೆ ಸ್ಥಳಗಳು, ಆಸ್ಪತ್ರೆ, ಚಿಕಿತ್ಸಾಲಯ, ಗ್ರಂಥಾಲಯ, ಮನರಂಜನಾ ಕೇಂದ್ರಗಳು, ಪ್ರಾಧಿಕಾರವು ಅಧಿಕೃತಗೊಳಿಸಿದ ಯಾವುದೇ ಸಾರ್ವಜನಿಕ ಉಪಯುಕ್ತ ಸೇವೆಯ ಸೇವಾ ಕೇಂದ್ರಗಳು ಅಥವಾ ಇತರ ಸೌಲಭ್ಯ; ಮತ್ತು ರಾಜ್ಯ ಸರ್ಕಾರವು ಅಧಿಸೂಚನೆಯ ಮೂಲಕ ನಿರ್ದಿಷ್ಟಪಡಿಸಬಹುದಾದಂಥ ಇತರ ಸೌಕರ್ಯಗಳನ್ನು ಒಳಗೊಳ್ಳುತ್ತದೆ;

(ಬಿ) **"ಪ್ರಾಧಿಕಾರ"** ಎಂದರೆ, 3ನೇ ಪ್ರಕರಣದ ಅಡಿಯಲ್ಲಿ ರಚಿಸಿದ ಬನವಾಸಿ ಅಭಿವೃದ್ಧಿ ಪ್ರಾಧಿಕಾರ;

(ಸಿ) **"ಬನವಾಸಿ"** ಎಂದರೆ, ಬನವಾಸಿ ಗ್ರಾಮ ಪಂಚಾಯಿತಿಯ ಮಿತಿಗಳು ಮತ್ತು ಬನವಾಸಿ ಗ್ರಾಮ ಪಂಚಾಯಿತಿಯಿಂದ ಇಪ್ಪತ್ತು ಕಿಲೋಮೀಟರ್‌ಗಳ ವ್ಯಾಪ್ತಿಯೊಳಗಿನ ಪ್ರದೇಶ ಮತ್ತು ಬನವಾಸಿ ಪಾರಂಪರಿಕ ತಾಣಗಳ ಅಭಿವೃದ್ಧಿಗಾಗಿ ರಾಜ್ಯ ಸರ್ಕಾರವು ಕಾಲಕಾಲಕ್ಕೆ ಆರ್ಜಿಸಿದ ಭೂಮಿಗಳು ಹಾಗೂ ರಾಜ್ಯ ಸರ್ಕಾರವು ಅಧಿಸೂಚನೆಯ ಮೂಲಕ ಘೋಷಿಸಲಾದ ಅಂಥ ಇತರ ಪ್ರದೇಶ ಮತ್ತು ಇವುಗಳೆಲ್ಲವನ್ನೂ ಒಳಗೊಳ್ಳುತ್ತದೆ;

(ಡಿ) "ಅಧ್ಯಕ್ಷ" ಎಂದರೆ, ಪ್ರಾಧಿಕಾರದ ಅಧ್ಯಕ್ಷ;

(ಇ) "ಆಯುಕ್ತ" ಎಂದರೆ, 10ನೇ ಪ್ರಕರಣದ ಅಡಿಯಲ್ಲಿ ನೇಮಕ ಮಾಡಿದ ಪ್ರಾಧಿಕಾರದ ಆಯುಕ್ತ; (ಎಫ್) "ನಿಧಿ" ಎಂದರೆ, ಪ್ರಾಧಿಕಾರದ ನಿಧಿ;

(ಜಿ) "ಪಾರಂಪರಿಕ ತಾಣ" ಎಂದರೆ, ಪ್ರಾಚೀನ ಸ್ಮಾರಕಗಳು ಮತ್ತು ಪುರಾತತ್ವ ಸ್ಥಳಗಳು ಹಾಗೂ ಅವಶೇಷಗಳ ಅಧಿನಿಯಮ, 1958ರ (1958ರ ಕೇಂದ್ರ ಅಧಿನಿಯಮ ಸಂಖ್ಯೆ 24) ಅಡಿಯಲ್ಲಿ ಸಂರಕ್ಷಿತ ಪ್ರದೇಶವೆಂದು ಉಲ್ಲೇಖಿಸಲಾದ ಪ್ರದೇಶವನ್ನು ಹೊರತುಪಡಿಸಿದ ಆದರೆ ಅನುಸೂಚಿಯಲ್ಲಿ ನಿರ್ದಿಷ್ಟಪಡಿಸಿದ ತಾಣಗಳನ್ನು ಒಳಗೊಳ್ಳುವ ಸಂಪೂರ್ಣ ಪ್ರದೇಶವಾಗಿದೆ;

(ಹೆಚ್) "ಸದಸ್ಯ" ಎಂದರೆ, ಪ್ರಾಧಿಕಾರದ ಸದಸ್ಯ;

(ಐ) "ವಿನಿಯಮಗಳು" ಎಂದರೆ, 44ನೇ ಪ್ರಕರಣದ ಅಡಿಯಲ್ಲಿ ರಚಿಸಿದ ಪ್ರಾಧಿಕಾರದ ವಿನಿಯಮಗಳು;

(ಜೆ) **"ಅನುಸೂಚಿ"** ಎಂದರೆ, ಈ ಅಧಿನಿಯಮಕ್ಕೆ ಲಗತ್ತಿಸಿದ ಅನುಸೂಚಿ; ಮತ್ತು

(ಕೆ) "ಉಪಾಧ್ಯಕ್ಷ" ಎಂದರೆ, ಪ್ರಾಧಿಕಾರದ ಉಪಾಧ್ಯಕ್ಷ.

## ಅಧ್ಯಾಯ – II
## ಪ್ರಾಧಿಕಾರ ಮತ್ತು ಅದರ ಉದ್ಯೋಗಿಗಳು

3. **ಪ್ರಾಧಿಕಾರದ ರಚನೆ.-** (1) ಈ ಅಧಿನಿಯಮದ ಪ್ರಾರಂಭದ ತರುವಾಯ, ಆದಷ್ಟು ಬೇಗನೆ, ಈ ಅಧಿನಿಯಮದ ಉದ್ದೇಶಗಳಿಗೆ ಸಂಬಂಧಿಸಿದಂತೆ ಬನವಾಸಿ ಅಭಿವೃದ್ಧಿ ಪ್ರಾಧಿಕಾರ ಎಂದು ಕರೆಯಲಾಗುವ ಒಂದು ಪ್ರಾಧಿಕಾರವನ್ನು ರಚಿಸತಕ್ಕದ್ದು. (2) ಉತ್ತರ ಕನ್ನಡ ಜಿಲ್ಲೆಯ ಶಿರಸಿ ತಾಲ್ಲೂಕಿನ ಬನವಾಸಿಯಲ್ಲಿ ಪ್ರಾಧಿಕಾರವು ತನ್ನ ಕೇಂದ್ರ ಕಾರ್ಯಸ್ಥಾನವನ್ನು ಹೊಂದಿರತಕ್ಕದ್ದು.

(3) ಪ್ರಾಧಿಕಾರವು, ಶಾಶ್ವತ ಉತ್ತರಾಧಿಕಾರ ಮತ್ತು ಸಾಮಾನ್ಯ ಮೊಹರನ್ನು ಹೊಂದಿರುವ, ಚರ ಮತ್ತು ಸ್ಥಿರ ಸ್ವತ್ತುಗಳೆರಡನ್ನು ಆರ್ಜಿಸುವ, ಧಾರಣ ಮಾಡುವ ಮತ್ತು ವಿಲೆ ಮಾಡುವ ಹಾಗೂ ಕರಾರು ಮಾಡಿಕೊಳ್ಳುವ ಅಧಿಕಾರವನ್ನು ಹೊಂದಿರುವ, ಮೇಲೆ ಹೇಳಿದ ಹೆಸರಿನ ಒಂದು ನಿಗಮಿತ ನಿಕಾಯವಾಗಿರತಕ್ಕದ್ದು ಮತ್ತು ಸದರಿ ಹೆಸರಿನಿಂದ ದಾವೆ ಹೂಡತಕ್ಕದ್ದು ಮತ್ತು ದಾವೆಗೆ ಗುರಿಯಾಗತಕ್ಕದ್ದು.

(4) ಪ್ರಾಧಿಕಾರವು ಈ ಮುಂದಿನ ಸದಸ್ಯರನ್ನು ಒಳಗೊಂಡಿರತಕ್ಕದ್ದು, ಎಂದರೆ:-

(ಎ) [1][(ಎ)ಮುಖ್ಯಮಂತ್ರಿ ಅಥವಾ ಕಂದಾಯ ಮಂತ್ರಿ ಅಥವಾ ಮುಖ್ಯಮಂತ್ರಿಯವರು ಆಯ್ಕೆ ಮಾಡಿದ ಯಾರೇ ಇತರ ಮಂತ್ರಿ - ಪದನಿಮಿತ್ತ ಅಧ್ಯಕ್ಷರು;][1]

(ಬಿ) ಉತ್ತರ ಕನ್ನಡ ಜಿಲ್ಲೆಯ ಉಸ್ತುವಾರಿ ಮಂತ್ರಿ – ಉಪಾಧ್ಯಕ್ಷ

(ಸಿ) ಕಂದಾಯ ಇಲಾಖೆಯ ಪ್ರಭಾರ ಹೊಂದಿರುವ ಮಂತ್ರಿ – ಪದನಿಮಿತ್ತ ಸದಸ್ಯ

(ಡಿ) ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಪ್ರಭಾರ ಹೊಂದಿರುವ ಮಂತ್ರಿ – ಪದನಿಮಿತ್ತ ಸದಸ್ಯ

(ಇ) ಬನವಾಸಿ ಪ್ರದೇಶವನ್ನು ಭಾಗಶಃವಾಗಿ ಅಥವಾ ಸಂಪೂರ್ಣವಾಗಿ ಪ್ರತಿನಿಧಿಸುವ ಲೋಕಸಭಾ ಸದಸ್ಯರು ಮತ್ತು ಕರ್ನಾಟಕ ವಿಧಾನಸಭಾ ಸದಸ್ಯರು – ಸದಸ್ಯ

(ಎಫ್) ಬನವಾಸಿಯಲ್ಲಿ ನೋಂದಾಯಿತ ಮತದಾರರಾಗಿರುವ ರಾಜ್ಯಸಭೆಯ ಮತ್ತು ಕರ್ನಾಟಕ ವಿಧಾನಸಭೆಯ (ಸ್ಥಳೀಯ) ಸದಸ್ಯ – ಸದಸ್ಯ

(ಜಿ) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಅಥವಾ ಪ್ರಧಾನ ಕಾರ್ಯದರ್ಶಿ, ಆರ್ಥಿಕ ಇಲಾಖೆ – ಪದನಿಮಿತ್ತ ಸದಸ್ಯ

(ಎಚ್) ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕಂದಾಯ ಇಲಾಖೆ – ಪದನಿಮಿತ್ತ ಸದಸ್ಯ

(ಐ) ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ – ಪದನಿಮಿತ್ತ ಸದಸ್ಯ

(ಜೆ) ಸರ್ಕಾರದ ಪ್ರಧಾನ ಕಾರ್ಯದರ್ಶಿ, ಪ್ರವಾಸೋದ್ಯಮ ಇಲಾಖೆ – ಪದನಿಮಿತ್ತ ಸದಸ್ಯ

(ಕೆ) ಜಿಲ್ಲಾಧಿಕಾರಿ, ಉತ್ತರ ಕನ್ನಡ, ಕಾರವಾರ – ಪದನಿಮಿತ್ತ ಸದಸ್ಯ

(ಎಲ್) ಪ್ರಾಧಿಕಾರದ ಆಯುಕ್ತ – ಸದಸ್ಯ ಕಾರ್ಯದರ್ಶಿ

(ಎಂ) ರಾಜ್ಯ ಸರ್ಕಾರವು ನಾಮನಿರ್ದೇಶನ ಮಾಡಬೇಕಾದ ಬನವಾಸಿಯ ಇತಿಹಾಸ ಮತ್ತು ಪರಂಪರೆಯಲ್ಲಿ ತಜ್ಞರಾದ ಇಬ್ಬರು ಸರ್ಕಾರೇತರ ಸದಸ್ಯರು.

1. 2025 ರ ಅಧಿನಿಯಮ ಸಂಖ್ಯೆ:55ರ ಮೂಲಕ ದಿ:10.09.2025 ರಿಂದ ಜಾರಿಗೆ ಬರುವಂತೆ ಪ್ರತಿಯೋಜಿಸಲಾಗಿದೆ.

4. **ಪದಾವಧಿ ಮತ್ತು ಸೇವಾ ಷರತ್ತುಗಳು.-** (1) ರಾಜ್ಯ ಸರ್ಕಾರದ ಇಚ್ಛೆಗೊಳಪಟ್ಟು, ರಾಜ್ಯ ಸರ್ಕಾರವು ನಾಮನಿರ್ದೇಶಿಸಿದ ಸರ್ಕಾರೇತರ ಸದಸ್ಯರು ಮೂರು ವರ್ಷಗಳ ಅವಧಿಗೆ ಪದಧಾರಣ ಮಾಡತಕ್ಕದ್ದು.

(2) ಯಾವೊಬ್ಬ ಸರ್ಕಾರೇತರ ಸದಸ್ಯನು, ತನ್ನ ಸಹಿಯೊಂದಿಗೆ ರಾಜ್ಯ ಸರ್ಕಾರಕ್ಕೆ ಬರೆಯುವ ಮೂಲಕ ತನ್ನ ಪದಕ್ಕೆ ರಾಜೀನಾಮೆ ನೀಡಬಹುದು. ಆದರೆ ಆತನ ರಾಜೀನಾಮೆಯು ಅಂಗೀಕಾರವಾಗುವವರೆಗೂ ಪದದಲ್ಲಿ ಮುಂದುವರೆಯತಕ್ಕದ್ದು.

(3) ಸರ್ಕಾರೇತರ ಸದಸ್ಯರು ನಿಯಮಿಸಬಹುದಾದಂಥ ಭತ್ಯಗಳನ್ನು ಪಡೆಯತಕ್ಕದ್ದು.

5. **ಸದಸ್ಯತ್ವದ ಪದಕ್ಕೆ ಅನರ್ಹತೆಗಳು.-** ಒಬ್ಬ ವ್ಯಕ್ತಿಯು,-

(ಎ) ರಾಜ್ಯ ಸರ್ಕಾರದ ಅಭಿಪ್ರಾಯದಲ್ಲಿ ನೈತಿಕ ಅಧಃಪತನವನ್ನೊಳಗೊಳ್ಳುವ ಒಂದು ಅಪರಾಧಕ್ಕಾಗಿ ಅಪರಾಧಿ ಎಂದು ನಿರ್ಣೀತನಾಗಿದ್ದು ಕಾರಾವಾಸದ ಶಿಕ್ಷೆಗೆ ಗುರಿಯಾಗಿದ್ದರೆ; ಅಥವಾ

(ಬಿ) ಅಸ್ವಸ್ಥ ಚಿತ್ತದವನಾಗಿದ್ದರೆ ಮತ್ತು ಹಾಗೆಂದು ಸಕ್ಷಮ ನ್ಯಾಯಾಲಯದಿಂದ ಘೋಷಿತನಾಗಿದ್ದರೆ; ಅಥವಾ

(ಸಿ) ಅವಿಮುಕ್ತ ದಿವಾಳಿಯಾಗಿದ್ದರೆ; ಅಥವಾ

(ಡಿ) ಕೇಂದ್ರ ಸರ್ಕಾರದ ಅಥವಾ ರಾಜ್ಯ ಸರ್ಕಾರದ ಅಥವಾ ಕೇಂದ್ರ ಸರ್ಕಾರ ಅಥವಾ ರಾಜ್ಯ ಸರ್ಕಾರವು ಒಡೆತನ ಹೊಂದಿರುವ ಅಥವಾ ನಿಯಂತ್ರಣ ಹೊಂದಿರುವ ಒಂದು ಸಂಸ್ಥೆ ಅಥವಾ ನಿಗಮದ ಸೇವೆಯಿಂದ ತೆಗೆದು ಹಾಕಲ್ಪಟ್ಟವನಾಗಿದ್ದರೆ ಅಥವಾ ವಜಾ ಮಾಡಲ್ಪಟ್ಟವನಾಗಿದ್ದರೆ; ಅಥವಾ

(ಇ) ಪ್ರಾಧಿಕಾರದ ಆದೇಶದಿಂದ ಮಾಡಲಾದ ಯಾವುದೇ ಕಾರ್ಯದಲ್ಲಿ ಅಥವಾ ಪ್ರಾಧಿಕಾರದೊಡನೆ ಅಥವಾ ಅದರ ಅಡಿಯಲ್ಲಿ ಅಥವಾ ಅದರ ಮೂಲಕ ಅಥವಾ ಅದರ ಪರವಾಗಿ ಮಾಡಿದ ಯಾವುದೇ ಕರಾರು ಅಥವಾ ನಿಯೋಜನೆಯಲ್ಲಿ ಸ್ವತಃ ಆತನು ಅಥವಾ ಪಾಲುದಾರನು ಪ್ರತ್ಯಕ್ಷವಾಗಿ ಅಥವಾ ಪರೋಕ್ಷವಾಗಿ ಯಾವುದೇ ಷೇರನ್ನು ಅಥವಾ ಹಿತಾಸಕ್ತಿಯನ್ನು ಹೊಂದಿದ್ದರೆ; ಅಥವಾ

(ಎಫ್) ಪ್ರಾಧಿಕಾರದ ಪರವಾಗಿ ವೇತನ ಪಡೆಯುವ ನ್ಯಾಯವಾದಿಯಾಗಿ ನಿಯೋಜಿತನಾಗಿದ್ದರೆ ಅಥವಾ ಪ್ರಾಧಿಕಾರದ ವಿರುದ್ಧವಾಗಿ ನ್ಯಾಯವಾದಿಯ ನಿಯೋಜನೆಯನ್ನು ಒಪ್ಪಿಕೊಂಡಿದ್ದರೆ, – ಅವನು ಸದಸ್ಯನಾಗಿ ನೇಮಕ ಹೊಂದಲು ಅಥವಾ ಸದಸ್ಯನಾಗಿರಲು ಅನರ್ಹನಾಗಿರತಕ್ಕದ್ದು:

ಪರಂತು, ಒಬ್ಬ ವ್ಯಕ್ತಿಯು, ಪ್ರಾಧಿಕಾರದ ವ್ಯವಹಾರಗಳಿಗೆ ಸಂಬಂಧಪಟ್ಟಂತೆ ಯಾವುದೇ ಜಾಹೀರಾತನ್ನು ಸೇರಿಸಲಾದ ಯಾವುದೇ ವೃತ್ತ ಪತ್ರಿಕೆಯಲ್ಲಿ ಷೇರು ಅಥವಾ ಹಿತಾಸಕ್ತಿಯನ್ನು ಹೊಂದಿದ್ದಾನೆಂಬ ಕಾರಣ ಮಾತ್ರದಿಂದಲೇ (ಇ) ಖಂಡದ ಅಡಿಯಲ್ಲಿ ಅನರ್ಹನಾಗತಕ್ಕದ್ದಲ್ಲ ಅಥವಾ ಸದರಿ ಖಂಡದ ಅರ್ಥವ್ಯಾಪ್ತಿಯಲ್ಲಿ ಯಾವುದೇ ಕರಾರು ಅಥವಾ ನಿಯೋಜನೆಯಲ್ಲಿ ಯಾವುದೇ ಷೇರು ಅಥವಾ ಹಿತಾಸಕ್ತಿಯನ್ನು ಹೊಂದಿದ್ದಾನೆಂದು ಭಾವಿಸತಕ್ಕದ್ದಲ್ಲ.

**6. ಸದಸ್ಯನನ್ನು ತೆಗೆದು ಹಾಕುವುದು.**– ರಾಜ್ಯ ಸರ್ಕಾರವು, ಸರ್ಕಾರೇತರ ಸದಸ್ಯನನ್ನು,–

(ಎ) ಆತನು 5ನೇ ಪ್ರಕರಣದಲ್ಲಿ ಹೇಳಲಾದ ಅನರ್ಹತೆಗಳಲ್ಲಿ ಯಾವುದೇ ಅನರ್ಹತೆಗೆ ಒಳಪಟ್ಟರೆ:

ಪರಂತು, ಯಾವೊಬ್ಬ ಸದಸ್ಯನನ್ನು, ಆತನು 5ನೇ ಪ್ರಕರಣದ (ಇ) ಖಂಡದಲ್ಲಿ ಹೇಳಲಾದ ಅನರ್ಹತೆಗೆ ಒಳಗಾಗಿದ್ದಾನೆಂಬ ಕಾರಣದ ಮೇಲೆ, ಪ್ರಸ್ತಾವದ ವಿರುದ್ಧ ತನ್ನ ಮನವಿಯನ್ನು ಸಲ್ಲಿಸಲು ಅವನಿಗೆ ಒಂದು ಅವಕಾಶವನ್ನು ಕೊಟ್ಟ ಹೊರತು, ತೆಗೆದು ಹಾಕತಕ್ಕದ್ದಲ್ಲ; ಅಥವಾ

(ಬಿ) ಆತನು ಕಾರ್ಯ ನಿರ್ವಹಿಸಲು ನಿರಾಕರಿಸಿದರೆ ಅಥವಾ ಕಾರ್ಯವನ್ನು ನಿರ್ವಹಿಸಲು ಅಸಮರ್ಥನಾದರೆ; ಅಥವಾ

(ಸಿ) ಅವನು ಗೈರು ಹಾಜರಾಗಲು ಪ್ರಾಧಿಕಾರದಿಂದ ಅನುಮತಿ ಪಡೆಯದೆ ಪ್ರಾಧಿಕಾರದ ಮೂರು ನಿರಂತರ ಸಭೆಗಳಿಗೆ ಗೈರುಹಾಜನಾದರೆ:

ಪರಂತು, ಈ ಖಂಡವು ಪದನಿಮಿತ್ತ ಸದಸ್ಯರಿಗೆ ಅನ್ವಯವಾಗತಕ್ಕದ್ದಲ್ಲ; ಅಥವಾ

(ಡಿ) ಆತನನ್ನು ಆ ಪದದಲ್ಲಿ ಮುಂದುವರಿಸಿದರೆ, ಸಾರ್ವಜನಿಕ ಹಿತಾಸಕ್ತಿಗೆ ಹಾನಿ ಉಂಟಾಗುವಂತೆ ತನ್ನ ಸ್ಥಾನವನ್ನು ದುರುಪಯೋಗಪಡಿಸಿಕೊಳ್ಳುವನೆಂದು ರಾಜ್ಯ ಸರ್ಕಾರವು ಅಭಿಪ್ರಾಯಪಟ್ಟರೆ,

– ಅವನನ್ನು ತೆಗೆದುಹಾಕತಕ್ಕದ್ದು:

ಪರಂತು, ಯಾವೊಬ್ಬ ಸದಸ್ಯನನ್ನು, ಆತನಿಗೆ ಪ್ರಸ್ತಾವದ ವಿರುದ್ಧ ತನ್ನ ಮನವಿಯನ್ನು ಹೇಳಿಕೊಳ್ಳಲು ಒಂದು ಅವಕಾಶವನ್ನು ಕೊಟ್ಟ ಹೊರತು ಈ ಖಂಡದ ಅಡಿಯಲ್ಲಿ ತೆಗೆದುಹಾಕತಕ್ಕದ್ದಲ್ಲ.

**7. ಮರು ನೇಮಕಾತಿಗೆ ಅರ್ಹತೆ.**– ಯಾವೊಬ್ಬ ಸದಸ್ಯನು, ಸರ್ಕಾರೇತರ ಸದಸ್ಯನಾಗಿರುವುದು ಸಮಾಪ್ತಿಯಾದಾಗ, 5ನೇ ಪ್ರಕರಣದ ಅಡಿಯಲ್ಲಿ ಅನ್ಯಥಾ ಹೇಳಲಾದ ಅನರ್ಹತೆಗೊಳಗಾಗದ ಹೊರತು, ಸರ್ಕಾರೇತರ ಸದಸ್ಯನಾಗಿ ಮರುನೇಮಕ ಹೊಂದಲು ಅರ್ಹನಾಗಿರತಕ್ಕದ್ದು.

**8. ಪ್ರಾಧಿಕಾರದ ಅಧಿಕಾರಗಳು.**– (1) ಈ ಅಧಿನಿಯಮದ ಉದ್ದೇಶ ಮತ್ತು ಉಪಬಂಧಗಳನ್ನು ಜಾರಿಗೊಳಿಸಲು, ಪ್ರಾಧಿಕಾರವು ತಾನು ಅವಶ್ಯಕವೆಂದು ಅಭಿಪ್ರಾಯಪಡುವಂಥ ಯಾವುವೇ ಕಾರ್ಯಗಳನ್ನು ಮಾಡುವುದಕ್ಕೆ ಸಾಮಾನ್ಯವಾಗಿ ಅಧಿಕಾರ ಹೊಂದಿರತಕ್ಕದ್ದು:

ಪರಂತು, ಈ ಪ್ರಕರಣದಲ್ಲಿ ಏನೇ ಒಳಗೊಂಡಿದ್ದರೂ, ಯಾವುದೇ ಇತರ ಪ್ರಾಧಿಕಾರವು ನಿರ್ವಹಿಸಬೇಕೆಂದು ಅಧಿನಿಯಮದಲ್ಲಿ ನಿರ್ದಿಷ್ಟವಾಗಿ ಹೇಳಲಾದ, ಅಂಥ ಕಾರ್ಯವನ್ನು ನೆರವೇರಿಸುವುದಕ್ಕೆ ಸಂಬಂಧಿಸಿದ ಪ್ರಾಧಿಕಾರಕ್ಕೆ ಪ್ರಾಧಿಕರಿಸಿದೆ ಎಂದು ಭಾವಿಸತಕ್ಕದ್ದು.

(2) (1)ನೇ ಉಪಪ್ರಕರಣದ ಸಾಮಾನ್ಯಾನ್ವಯಕ್ಕೆ ಬಾಧಕವಾಗದಂತೆ ಪ್ರಾಧಿಕಾರವು,

(ಎ) ನಿಯಮಿಸಬಹುದಾಂತಹ ನಿಯಮಗಳಿಗೆ ಒಳಪಟ್ಟು, ಈ ಅಧಿನಿಯಮದ ಯಾವುವೇ ಉದ್ದೇಶಗಳನ್ನು ನೆರವೇರಿಸಲು ಅವಶ್ಯಕ ಅಥವಾ ಯುಕ್ತವೆಂದು ತಾನು ಪರಿಗಣಿಸಬಹುದಾದ ಅಂಥ ಎಲ್ಲಾ ಕರಾರುಗಳನ್ನು ಮಾಡಿಕೊಳ್ಳಲು ಮತ್ತು ನೆರವೇರಿಸಲು ಹಾಗೂ ಪ್ರತಿಯೊಂದು ಕರಾರನ್ನು, ಪ್ರಾಧಿಕಾರದ ಪರವಾಗಿ ಪ್ರಾಧಿಕಾರದ ಆಯುಕ್ತರು ಮಾಡಿಕೊಳ್ಳತಕ್ಕದ್ದು:

ಪರಂತು, ಐದು ಲಕ್ಷ ರೂಪಾಯಿಗಳು ಅಥವಾ ಅದಕ್ಕೂ ಹೆಚ್ಚಿನ ವೆಚ್ಚವನ್ನೊಳಗೊಳ್ಳುವ ಯಾವುದೇ ಕರಾರನ್ನು, ರಾಜ್ಯ ಸರ್ಕಾರದ ಪೂರ್ವಮಂಜೂರಾತಿ ಇಲ್ಲದೇ ಮಾಡಿಕೊಳ್ಳತಕ್ಕದ್ದಲ್ಲ.

(ಬಿ) ರಾಜ್ಯ ಸರ್ಕಾರದ ಪೂರ್ವಮಂಜೂರಾತಿಯೊಂದಿಗೆ ಮತ್ತು ಈ ಸಂಬಂಧವಾಗಿ ನಿಯಮಿಸಬಹುದಾದಂತಹ ಷರತ್ತಿಗೊಳಪಟ್ಟು, ಈ ಅಧಿನಿಯಮದ ಉದ್ದೇಶಗಳಿಗಾಗಿ ಕಾಲಕಾಲಕ್ಕೆ ಅಗತ್ಯವಾಗುವ ಯಾವುದೇ ಮೊಬಲಗನ್ನು ಸಾಲವಾಗಿ ಪಡೆಯಲು; ಮತ್ತು

(ಸಿ) 38ನೇ ಪ್ರಕರಣ ಮತ್ತು ನಿಯಮಿಸಬಹುದಾದಂತಹ ನಿರ್ಬಂಧಗಳು, ಷರತ್ತುಗಳು ಮತ್ತು ಪರಿಮಿತಿಗಳಿಗೆ ಒಳಪಟ್ಟು, ತನಗೆ ಸೇರಿದ ಚರ ಅಥವಾ ಸ್ಥಿರ ಸ್ವತ್ತನ್ನು ಗುತ್ತಿಗೆಗೆ ನೀಡಲು, ಮಾರಾಟ ಅಥವಾ ಇತರ ರೀತಿಯಲ್ಲಿ ವರ್ಗಾವಣೆ ಮಾಡಲು ಮತ್ತು ರಾಜ್ಯ ಸರ್ಕಾರದ ಪೂರ್ವಾನುಮೋದನೆಯೊಂದಿಗೆ ಯಾವುದೇ ಅಭಿವೃದ್ಧಿ ಯೋಜನೆಯ ಉದ್ದೇಶಕ್ಕಾಗಿ ತನ್ನಲ್ಲಿ ನಿಹಿತವಾಗಿರುವ ಅಥವಾ ತಾನು ಆರ್ಜಿಸಿದ ಯಾವುದೇ ಭೂಮಿಯನ್ನು ಮೈದಾನಗಳನ್ನು ರೂಪಿಸುವ ಅಥವಾ ಕಟ್ಟಡವನ್ನು ನಿರ್ಮಿಸುವ ಉದ್ದೇಶಗಳಿಗಾಗಿ ಅಥವಾ ಇನ್ನಾವುದೇ ಇತರ ರೀತಿಯಲ್ಲಿ ವಿನಿಯೋಗಿಸಲು ಅಥವಾ ಬಳಸಲು, – ಅಧಿಕಾರವನ್ನು ಹೊಂದಿರತಕ್ಕದ್ದು.

**9. ಪ್ರಾಧಿಕಾರದ ಉಪ ಸಮಿತಿ.–** (1) ಪ್ರಾಧಿಕಾರವು, ಯಾವುದೇ ನಿರ್ದಿಷ್ಟ ಉದ್ದೇಶಕ್ಕಾಗಿ, ಪ್ರತಿಯೊಂದು ಉಪ ಸಮಿತಿಗೆ ಸಂಬಂಧಿಸಿದಂತೆ ಆಯುಕ್ತನು ಅಧ್ಯಕ್ಷನಾಗಿರುವ ಐದು ಜನರನ್ನು ಮೀರದಂಥ ಇತರ ಸದಸ್ಯರಿರುವ ಒಂದು ಉಪಸಮಿತಿಯನ್ನು ರಚಿಸಬಹುದು.

(2) ಪ್ರಾಧಿಕಾರವು ಅದಕ್ಕೆ ಪ್ರತ್ಯಾಯೋಜಿಸಿದ ಅಂಥ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಮತ್ತು ಅಂಥ ಕರ್ತವ್ಯಗಳನ್ನು ಉಪಸಮಿತಿಯ ನಿರ್ವಹಿಸತಕ್ಕದ್ದು.

(3) ಪ್ರತಿಯೊಂದು ಉಪಸಮಿತಿಯು, ಕನಿಷ್ಠ ಪಕ್ಷ ತಿಂಗಳಿಗೆ ಒಂದು ಸಲವಾದರೂ ಸಭೆ ಸೇರತಕ್ಕದ್ದು ಮತ್ತು ವಿನಿಯಮಗಳ ಮೂಲಕ ಉಪಬಂಧ ಕಲ್ಪಿಸಬಹುದಾದಂತೆ, ಅದರ ಸಭೆಯ ಕಾರ್ಯಕಲಾಪಗಳಿಗೆ ಸಂಬಂಧಿಸಿದ ಅಂತಹ ಪ್ರಕ್ರಿಯಾ ನಿಯಮಗಳನ್ನು ಪಾಲಿಸತಕ್ಕದ್ದು.

**10. ಆಯುಕ್ತನ ನೇಮಕಾತಿ.–** (1) ರಾಜ್ಯ ಸರ್ಕಾರವು, ಕರ್ನಾಟಕ ಆಡಳಿತ ಸೇವೆಗಳ (ಹಿರಿಯ ಶ್ರೇಣಿ) ಅಥವಾ ಸರ್ಕಾರದ ಉಪಕಾರ್ಯದರ್ಶಿ ದರ್ಜೆಗೆ ಕಡಿಮೆಯಲ್ಲದ ದರ್ಜೆಯ ಒಬ್ಬ ಅಧಿಕಾರಿಯನ್ನು ಪ್ರಾಧಿಕಾರದ ಆಯುಕ್ತನನ್ನಾಗಿ ನೇಮಕ ಮಾಡತಕ್ಕದ್ದು.

(2) ರಾಜ್ಯ ಸರ್ಕಾರವು, ಕಾಲಕಾಲಕ್ಕೆ ನಿರ್ಧರಿಸಬಹುದಾದಂಥ ವೇತನ ಮತ್ತು ಇತರ ಭತ್ಯೆಗಳನ್ನು ಆಯುಕ್ತನು ಸ್ವೀಕರಿಸತಕ್ಕದ್ದು. ಆಯುಕ್ತನ ಸೇವಾ ಷರತ್ತುಗಳನ್ನು ಕರ್ನಾಟಕ ಸಿವಿಲ್ ಸೇವಾ ನಿಯಮಗಳ ಅಡಿಯಲ್ಲಿರುವಂತೆ ರಾಜ್ಯ ಸರ್ಕಾರವು ನಿರ್ವಹಿಸತಕ್ಕದ್ದು.

(3) ರಾಜ್ಯ ಸರ್ಕಾರವು, ಕಾಲಕಾಲಕ್ಕೆ ತಾನು ಯುಕ್ತವೆಂದು ಭಾವಿಸುವಂಥ ಅವಧಿಗೆ ಆಯುಕ್ತನಿಗೆ ಗೈರು ಹಾಜರಾಗಲು ಅನುಮತಿಯನ್ನು ನೀಡಬಹುದು.

**11. ಆಯುಕ್ತನ ಅಧಿಕಾರಗಳು ಮತ್ತು ಕರ್ತವ್ಯಗಳು.–** (1) ಆಯುಕ್ತನು, ಪ್ರಾಧಿಕಾರದ ಮುಖ್ಯ ಕಾರ್ಯನಿರ್ವಾಹಕ ಮತ್ತು ಆಡಳಿತಾಧಿಕಾರಿಯಾಗಿರತಕ್ಕದ್ದು.

(2) ಆಯುಕ್ತನು, ಈ ಅಧಿನಿಯಮದ ಮೂಲಕ ಅಥವಾ ಅದರ ಅಡಿಯಲ್ಲಿ ಅಥವಾ ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಅಡಿಯಲ್ಲಿ ಆತನಿಗೆ ಪ್ರದತ್ತವಾಗಿರುವಂತಹ ಪ್ರಕಾರ್ಯಗಳನ್ನು ನೆರವೇರಿಸುವುದರ ಜೊತೆಗೆ,–

(ಎ) ಪ್ರಾಧಿಕಾರದ ಗೊತ್ತುವಳಿಗಳನ್ನು ಕಾರ್ಯಗತಗೊಳಿಸತಕ್ಕದ್ದು;

(ಬಿ) ಪ್ರಾಧಿಕಾರದ ವ್ಯವಹಾರವನ್ನು ನಡೆಸುವುದು ಮತ್ತು ಪತ್ರ ವ್ಯವಹಾರವನ್ನು ನಡೆಸುವುದು;

(ಸಿ) ರಾಜ್ಯ ಸರ್ಕಾರವು ನಿರ್ದೇಶಿಸಬಹುದಾದ ಅಂಥ ಯೋಜನೆಗಳನ್ನು ಕಾರ್ಯಗತಗೊಳಿಸುವುದು ಮತ್ತು ಜಾರಿಗೊಳಿಸುವುದು ಹಾಗೂ ಅದಕ್ಕೆ ಸಂಬಂಧಿಸಿದ ಅಗತ್ಯ ವೆಚ್ಚಗಳನ್ನು ಭರಿಸುವುದು;

(ಡಿ) ಪ್ರಾಧಿಕಾರದ ಯೋಜನೆಗಳ ಅನುಷ್ಠಾನಕ್ಕೆ ಜವಾಬ್ದಾರರಾಗಿರತಕ್ಕದ್ದು;

(ಇ) ಪ್ರಾಧಿಕಾರದ ಬ್ಯಾಂಕಿನ ಖಾತೆಗಳ ವ್ಯವಹಾರವನ್ನು ನಡೆಸತಕ್ಕದ್ದು ಮತ್ತು ಪ್ರಾಧಿಕಾರದ ಲೆಕ್ಕಪತ್ರಗಳನ್ನು ನಿರ್ವಹಿಸಲು ಜವಾಬ್ದಾರರಾಗಿರತಕ್ಕದ್ದು;

(ಎಫ್) ಪ್ರಾಧಿಕಾರದ ಅಧಿಕಾರಿಗಳು ಮತ್ತು ನೌಕರರ ಮೇಲೆ ಕಾರ್ಯನಿರ್ವಹಣೆ ಆಡಳಿತ ವಿಷಯಗಳು ಮತ್ತು ಅಂತಹ ಅಧಿಕಾರಿಗಳು ಮತ್ತು ನೌಕರರ ಸೇವಾ ಷರತ್ತುಗಳು ಹಾಗೂ ಅವರ ವೇತನ ಮತ್ತು ಭತ್ಯೆಗಳನ್ನು ವಿನಿಯಮನಗೊಳಿಸುವ ಬಗ್ಗೆ ಮೇಲ್ವಿಚಾರಣೆ ಹಾಗೂ ನಿಯಂತ್ರಣವನ್ನು ಚಲಾಯಿಸತಕ್ಕದ್ದು;

(ಜಿ) ಪ್ರಾಧಿಕಾರದ ವ್ಯವಹರಣೆಗಳ ಸಂಕ್ಷಿಪ್ತ ಟಿಪ್ಪಣಿಗಳ ಪ್ರತಿಯನ್ನು ಮತ್ತು ರಾಜ್ಯ ಸರ್ಕಾರವು ಕಾಲಕಾಲಕ್ಕೆ ಕೋರಬಹುದಾದ ಯಾವುದೇ ಲಿಖಿತ ಅಥವಾ ಇತರ ಮಾಹಿತಿಯನ್ನು ರಾಜ್ಯ ಸರ್ಕಾರಕ್ಕೆ ಒದಗಿಸತಕ್ಕದ್ದು; ಮತ್ತು

(ಎಚ್) ಈ ಅಧಿನಿಯಮದ ಅಥವಾ ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಇತರ ಕಾನೂನಿನ ಮೂಲಕ ಅಥವಾ ಅದರ ಅಡಿಯಲ್ಲಿ ಆತನಿಗೆ ಪ್ರದತ್ತವಾದ ಅಂಥ ಇತರ ಪ್ರಕಾರ್ಯಗಳನ್ನು ನೆರವೇರಿಸತಕ್ಕದ್ದು.

**12. ಪ್ರಾಧಿಕಾರದ ನೌಕರರು.–** (1) ನಿಯಮಿಸಬಹುದಾದ ಅಂಥ ನಿಯಮಗಳಿಗೆ ಒಳಪಟ್ಟು, ಪ್ರಾಧಿಕಾರವು, ಅಧಿನಿಯಮದ ಪರಿಣಾಮಕಾರಿ ಅನುಷ್ಠಾನಕ್ಕಾಗಿ ಅದು ಅವಶ್ಯವೆಂದು ಕಂಡುಬರುವಂಥ ಸಂಖ್ಯೆಯ ನೌಕರರನ್ನು ನೇಮಕ ಮಾಡಿಕೊಳ್ಳಬಹುದು:

ಪರಂತು, ರಾಜ್ಯ ಸರ್ಕಾರವು, ಭಾರತೀಯ ಲೆಕ್ಕ ಪರಿಶೋಧನೆ ಮತ್ತು ಲೆಕ್ಕಪತ್ರ ಸೇವೆಯಿಂದಾಗಲಿ ಅಥವಾ ಕರ್ನಾಟಕ ರಾಜ್ಯ ಲೆಕ್ಕಪರಿಶೋಧನೆ ಮತ್ತು ಲೆಕ್ಕಪತ್ರ ಸೇವೆಗಳಿಂದಾಗಲಿ, "ಎ" ಗುಂಪಿನ ಕಿರಿಯ ವೇತನ ಶ್ರೇಣಿಯ ದರ್ಜೆಗಿಂತ ಕಡಿಮೆಯಲ್ಲದ ದರ್ಜೆಯ ಅಧಿಕಾರಿಯನ್ನು ಪ್ರತಿನಿಯೋಜನೆಯ ಮೇಲೆ ಹಣಕಾಸು ಮತ್ತು ಲೆಕ್ಕಪತ್ರಗಳ ನಿಯಂತ್ರಣಾಧಿಕಾರಿಯನ್ನಾಗಿ ನೇಮಕ ಮಾಡತಕ್ಕದ್ದು.

(2) ಹಣಕಾಸು ಮತ್ತು ಲೆಕ್ಕಪತ್ರಗಳ ನಿಯಂತ್ರಣಾಧಿಕಾರಿಯು, ಆಯುಕ್ತನಿಗೆ ವರದಿ ಮಾಡತಕ್ಕದ್ದು ಮತ್ತು ಪ್ರಾಧಿಕಾರದ ಹಣಕಾಸು ವ್ಯವಹಾರಗಳ ಬಗ್ಗೆ ವಾಸ್ತವಿಕವಾದ ಹಾಗೂ ನ್ಯಾಯಯುತವಾದ ಚಿತ್ರಣವನ್ನು ನೀಡುವ ಮೂಲಕ, ಹಣಕಾಸು ನಿಯಮಗಳನ್ನು ಪಾಲಿಸಲಾಗುತ್ತಿದೆ; ಮತ್ತು ಲೆಕ್ಕಪತ್ರಗಳನ್ನು ಅಂದಂದಿನವರೆಗೆ ನಿರ್ವಹಿಸಲಾಗುತ್ತಿದೆ ಎಂಬುದನ್ನು ಖಚಿತಪಡಿಸತಕ್ಕದ್ದು.

(3) (1)ನೇ ಉಪಪ್ರಕರಣದಲ್ಲಿ ಉಲ್ಲೇಖಿಸಲಾದ ನೌಕರರ ವೇತನಗಳು, ಭತ್ಯೆಗಳು ಮತ್ತು ಇತರ ಸೇವಾ ಷರತ್ತುಗಳು ನಿಯಮಿಸಬಹುದಾದಂತೆ ಇರತಕ್ಕದ್ದು.

(4) ಆಯುಕ್ತನು, ಪ್ರಾಧಿಕಾರದ ನೌಕರರಿಗೆ ಸಂಬಂಧಿಸಿದಂತೆ ನೇಮಕಾತಿ ಪ್ರಾಧಿಕಾರಿಯಾಗಿರತಕ್ಕದ್ದು ಮತ್ತು ಪ್ರಾಧಿಕಾರದ ಸಿಬ್ಬಂದಿಯ ಮೇಲೆ ಸಾಮಾನ್ಯ ನಿಯಂತ್ರಣ ಮತ್ತು ಮೇಲ್ವಿಚಾರಣೆಯನ್ನು ಚಲಾಯಿಸತಕ್ಕದ್ದು.

**13. ಪ್ರಾಧಿಕಾರದ ಅಡಿಯಲ್ಲಿನ ಸೇವೆಗಳಿಗಾಗಿ ಸಾಮಾನ್ಯ ಅನರ್ಹತೆ.**- ಯಾವೊಬ್ಬ ವ್ಯಕ್ತಿಯು, ಖುದ್ದಾಗಿ ಅಥವಾ ಆತನ ಪಾಲುದಾರನ ಮೂಲಕ ಅಥವಾ ಆತನ ಏಜೆಂಟ್‌ನ ಮೂಲಕ, ಪ್ರಾಧಿಕಾರದ ಮೂಲಕ ಅಥವಾ ಅದರ ಪರವಾಗಿ ಯಾವುದೇ ಕರಾರಿನಲ್ಲಿ ಪ್ರತ್ಯಕ್ಷವಾಗಿ ಅಥವಾ ಪರೋಕ್ಷವಾಗಿ ಷೇರು ಅಥವಾ ಹಿತಾಸಕ್ತಿಯನ್ನು ಹೊಂದಿದ್ದರೆ, ಅಥವಾ ಪ್ರಾಧಿಕಾರದ ಅಡಿಯಲ್ಲಿ, ಮೂಲಕ ಅಥವಾ ಅದರ ಪರವಾಗಿ ಅನ್ಯಥಾ ಅದರ ಅಧಿಕಾರಿ ಅಥವಾ ನೌಕರನ ಹೊರತು ಯಾವುದೇ ನಿಯೋಜನೆಯನ್ನು ಹೊಂದದೆ, ಪ್ರಾಧಿಕಾರದ ಅಧಿಕಾರಿ ಅಥವಾ ಉದ್ಯೋಗಿಯಾಗತಕ್ಕದ್ದಲ್ಲ ಅಥವಾ ಆಗಿರತಕ್ಕದ್ದಲ್ಲ.

**14. ಪ್ರಾಧಿಕಾರದ ಸಭೆಗಳು.**- (1) ಪ್ರಾಧಿಕಾರದ ಆಯುಕ್ತನು, ಪ್ರಾಧಿಕಾರದ ಅಧ್ಯಕ್ಷರ ಪೂರ್ವಾನುಮತಿಯೊಂದಿಗೆ ಮತ್ತು ಅಧ್ಯಕ್ಷನು ಯುಕ್ತವೆಂದು ಭಾವಿಸಬಹುದಾದಂತಹ ಅವಧಿಗಳ ಅಂತರದಲ್ಲಿ ಮತ್ತು ಅಧ್ಯಕ್ಷನು ನಿರ್ಧರಿಸಬಹುದಾದಂತಹ ಸ್ಥಳದಲ್ಲಿ, ಪ್ರಾಧಿಕಾರದ ಸಭೆಗಳನ್ನು ನಡೆಸತಕ್ಕದ್ದು:

ಪರಂತು, ಪ್ರಾಧಿಕಾರವು ಒಂದು ಕ್ಯಾಲೆಂಡರ್ ವರ್ಷದಲ್ಲಿ ಕನಿಷ್ಠ ಎರಡು ಬಾರಿಯಾದರೂ ಸಭೆ ಸೇರತಕ್ಕದ್ದು.

(2) ಪ್ರತಿಯೊಂದು ಸಭೆಯ, ಅಧ್ಯಕ್ಷತೆಯನ್ನು ಅಧ್ಯಕ್ಷನು ವಹಿಸಿಕೊಳ್ಳತಕ್ಕದ್ದು ಮತ್ತು ಯಾವುದೇ ಕಾರಣದಿಂದಾಗಿ ಅಧ್ಯಕ್ಷನಿಗೆ ಯಾವುದೇ ಸಭೆಗೆ ಹಾಜರಾಗಲು ಸಾಧ್ಯವಾಗದಿದ್ದರೆ, ಉಪಾಧ್ಯಕ್ಷನು ಸಭೆಯ ಅಧ್ಯಕ್ಷತೆಯನ್ನು ವಹಿಸಿಕೊಳ್ಳತಕ್ಕದ್ದು ಹಾಗೂ ಯಾವುದೇ ಕಾರಣದಿಂದಾಗಿ ಉಪಾಧ್ಯಕ್ಷನಿಗೆ ಸಭೆಗೆ ಹಾಜರಾಗಲು ಸಾಧ್ಯವಾಗದಿದ್ದರೆ, ಸಭೆಯಲ್ಲಿ ಹಾಜರಿರುವ ಸದಸ್ಯರು ಆಯ್ಕೆ ಮಾಡುವ ಯಾವೊಬ್ಬ ಇತರ ಸದಸ್ಯನು ಸಭೆಯ ಅಧ್ಯಕ್ಷತೆಯನ್ನು ವಹಿಸತಕ್ಕದ್ದು.

(3) ಪ್ರಾಧಿಕಾರದ ತೀರ್ಮಾನಗಳನ್ನು ಹಾಜರಿದ್ದು ಮತ ಹಾಕುವ ಸದಸ್ಯರ ಅವಿರೋಧ ಸಮ್ಮತಿ ಸೂಚನೆ ಮೂಲಕ ಕೈಗೊಳ್ಳತಕ್ಕದ್ದು. ಪ್ರಾಧಿಕಾರದ ಮುಂದೆ ತೀರ್ಮಾನಕ್ಕಾಗಿ ಬಂದ ಯಾವುದೇ ನಿರ್ದಿಷ್ಟ ವಿಷಯದ ಬಗ್ಗೆ ಯಾವುದೇ ಭಿನ್ನಾಭಿಪ್ರಾಯವಿದ್ದಲ್ಲಿ, ಆಯುಕ್ತನು, ಆ ವಿಷಯವನ್ನು ರಾಜ್ಯ ಸರ್ಕಾರಕ್ಕೆ ಕಳುಹಿಸತಕ್ಕದ್ದು ಮತ್ತು ಅಂಥ ವಿಷಯಗಳ ಬಗ್ಗೆ ರಾಜ್ಯ ಸರ್ಕಾರದ ತೀರ್ಮಾನವು ಅಂತಿಮವಾಗಿರತಕ್ಕದ್ದು.

(4) ಆಯುಕ್ತನು, ಪ್ರಾಧಿಕಾರದ ತೀರ್ಮಾನಗಳನ್ನು ಕಾರ್ಯಗತಗೊಳಿಸತಕ್ಕದ್ದು:

ಪರಂತು, ಪ್ರಾಧಿಕಾರವು ಕೈಗೊಂಡ ನಿರ್ಣಯವು, ಈ ಅಧಿನಿಯಮದ ಅಥವಾ ಇತರ ಕಾನೂನಿನ ಅಥವಾ ಈ ಅಧಿನಿಯಮದ ಅಥವಾ ಇತರ ಯಾವುದೇ ಕಾನೂನಿನ ಅಡಿಯಲ್ಲಿ ರಚಿಸಿದ ಅಥವಾ ಹೊರಡಿಸಿದ ಯಾವುದೇ ನಿಯಮ, ಅಧಿಸೂಚನೆ ಅಥವಾ ವಿನಿಯಮಗಳ ಯಾವುದೇ ಉಪಬಂಧವನ್ನು ಅಥವಾ ರಾಜ್ಯ ಸರ್ಕಾರವು ಹೊರಡಿಸಿದ ಯಾವುದೇ ಆದೇಶವನ್ನು ಉಲ್ಲಂಘಿಸುತ್ತದೆಯೆಂದು ಅಥವಾ ಪ್ರಾಧಿಕಾರದ ಹಿತಾಸಕ್ತಿಗಳಿಗೆ ಅಥವಾ ಪ್ರಾಧಿಕಾರದ ಅಭಿವೃದ್ಧಿ ಮತ್ತು ನಿರ್ವಹಣೆಯ ಹಿತಾಸಕ್ತಿಗಳಿಗೆ ಧಕ್ಕೆ ಉಂಟುಮಾಡುತ್ತದೆ ಅಥವಾ ಹಾನಿಕಾರಕವಾಗುತ್ತದೆಯೆಂದು ಆಯುಕ್ತನು ಅಭಿಪ್ರಾಯಪಟ್ಟರೆ, ಆತನು ನಿರ್ಣಯವನ್ನು ಅನುಮೋದಿಸಿದ ಹದಿನೈದು ದಿನಗಳ ಒಳಗಾಗಿ ವಿಷಯದ ಬಗ್ಗೆ ಆದೇಶಗಳನ್ನು ಕೋರಿ ರಾಜ್ಯ ಸರ್ಕಾರಕ್ಕೆ ಕಳುಹಿಸತಕ್ಕದ್ದು ಮತ್ತು ಪ್ರಾಧಿಕಾರದ ಮುಂದಿನ ಸಭೆಯಲ್ಲಿ ತಾನು ಕೈಗೊಂಡ ಕ್ರಮದ ಬಗ್ಗೆ ಪ್ರಾಧಿಕಾರಕ್ಕೆ ತಿಳಿಸತಕ್ಕದ್ದು ಮತ್ತು ಆಯುಕ್ತನು ಕಳುಹಿಸಿಕೊಟ್ಟ ಅಂತಹ ವಿಷಯ ಬಗ್ಗೆ ರಾಜ್ಯ ಸರ್ಕಾರವು ಆದೇಶವನ್ನು ನೀಡುವವರೆಗೆ, ಆಯುಕ್ತನು ಅಂಥ ನಿರ್ಣಯವನ್ನು ಜಾರಿಗೆ ತರಲು ಬದ್ಧನಾಗಿರತಕ್ಕದ್ದಲ್ಲ.

(5) ಪ್ರಾಧಿಕಾರವು ವಿನಿಮಯಗಳ ಮೂಲಕ ಅದರ ಸಭೆಗಳ ಕಾರ್ಯಕಲಾಪಗಳ ನಿರ್ವಹಣೆಗೆ ಸಂಬಂಧಪಟ್ಟಂತೆ, ಈ ಅಧಿನಿಯಮದ ಅಥವಾ ಅದರ ಅಡಿಯಲ್ಲಿ ರಚಿಸಿದ ನಿಯಮಗಳ ಉಪಬಂಧಗಳಿಗೆ ಅಸಂಗತವಾಗದಂತೆ ಕಾರ್ಯವಿಧಾನಗಳನ್ನು ನಿರ್ದಿಷ್ಟಪಡಿಸಬಹುದು.

**15. ವ್ಯವಹರಣೆಗಳು ಸರಿಯಾದುದೆಂದು ಮತ್ತು ಸಿಂಧುವೆಂದು ಪೂರ್ವಭಾವನೆ ಮಾಡುವುದು.**- ಅಧ್ಯಕ್ಷನಾಗಿ ಅಥವಾ ಸದಸ್ಯನಾಗಿ ಕಾರ್ಯನಿರ್ವಹಿಸುವ ಯಾವೊಬ್ಬ ವ್ಯಕ್ತಿಯ ಅನರ್ಹತೆ ಅಥವಾ ನೇಮಕಾತಿಯಲ್ಲಿನ ನ್ಯೂನತೆಯು, ಪ್ರಾಧಿಕಾರದ ಯಾವುದೇ ಕೃತ್ಯ ಅಥವಾ ನಡುವಳಿಯು ಅನ್ಯಥಾ ಈ ಅಧಿನಿಯಮದ ಉಪಬಂಧಗಳಿಗೆ ಅನುಸಾರವಾಗಿದ್ದರೆ, ಅಂತಹ ಕೃತ್ಯ ಅಥವಾ ವ್ಯವಹರಣೆಯನ್ನು ದೂಷಿತಗೊಳಿಸುತ್ತದೆಂದು ಭಾವಿಸತಕ್ಕದ್ದಲ್ಲ.

**16. ಪರಿಚಲನೆಯ ಮೂಲಕ ಪ್ರಾಧಿಕಾರದ ತೀರ್ಮಾನಗಳನ್ನು ಸೂಚಿಸುವುದು.**- (1) ಪ್ರಾಧಿಕಾರದ ಅಧ್ಯಕ್ಷನು ಯಾವುದೇ ಪ್ರಕರಣವನ್ನು, ಪ್ರಾಧಿಕಾರದ ಒಂದು ಸಭೆಯಲ್ಲಿ ಚರ್ಚೆಗೆ ಬದಲಾಗಿ ಆ ಬಗ್ಗೆ ಸದಸ್ಯರ ಅಭಿಪ್ರಾಯವನ್ನು ಕೋರಿ ಪ್ರಾಧಿಕಾರ ಸದಸ್ಯರ ನಡುವೆ ಪರಿಚಲನೆ ಮಾಡಿಸಲು ನಿರ್ದೇಶಿಸಬಹುದು. ಹಾಗೆ ಪರಿಚಲನೆ ಮಾಡಲಾದ ಟಿಪ್ಪಣಿಯಲ್ಲಿರುವ ಪ್ರಸ್ತಾವವನ್ನು ಎಲ್ಲಾ ಸದಸ್ಯರು ಅವಿರೋಧವಾಗಿ ಒಪ್ಪಿಕೊಂಡಲ್ಲಿ, ಅದನ್ನು ಪ್ರಾಧಿಕಾರದ ಸಮ್ಮತಿಸೂಚಕ ನಿರ್ಣಯವೆಂಬುದಾಗಿ ಭಾವಿಸತಕ್ಕದ್ದು ಮತ್ತು ತದನುಸಾರವಾಗಿ ಮುಂದಿನ ಕ್ರಮ ಕೈಗೊಳ್ಳತಕ್ಕದ್ದು. ಪ್ರಾಧಿಕಾರದ ತೀರ್ಮಾನಕ್ಕಾಗಿ ಪರಿಚಲನೆ ಮಾಡಲಾದ ಯಾವುದೇ ನಿರ್ದಿಷ್ಟ ವಿಷಯದ ಬಗ್ಗೆ ಯಾವುದೇ ಭಿನ್ನಾಭಿಪ್ರಾಯ ವ್ಯಕ್ತವಾದರೆ, ಆಯುಕ್ತನು ಆ ವಿಷಯವನ್ನು ರಾಜ್ಯ ಸರ್ಕಾರಕ್ಕೆ ಕಳುಹಿಸತಕ್ಕದ್ದು ಮತ್ತು ಆ ಬಗ್ಗೆ ರಾಜ್ಯ ಸರ್ಕಾರದ ತೀರ್ಮಾನವೇ ಅಂತಿಮವಾಗಿರತಕ್ಕದ್ದು.

(2) (1)ನೇ ಉಪಪ್ರಕರಣದ ಅಡಿಯಲ್ಲಿ ಅಭಿಪ್ರಾಯಕ್ಕಾಗಿ ಪರಿಚಲನೆ ಮಾಡಲಾದ ಸಂದರ್ಭಗಳಲ್ಲಿ, ಯಾವೊಬ್ಬ ಸದಸ್ಯನು ಟಿಪ್ಪಣಿಯಲ್ಲಿ ನಿರ್ದಿಷ್ಟಪಡಿಸಬೇಕಾದ ದಿನಾಂಕದೊಳಗೆ ತನ್ನ ಅಭಿಪ್ರಾಯವನ್ನು ತಿಳಿಸಲು ತಪ್ಪಿದರೆ, ಅಂತಹ ಸದಸ್ಯನು ಪರಿಚಲನೆ ಮಾಡಿದ ಟಿಪ್ಪಣಿಯಲ್ಲಿರುವ ಪ್ರಸ್ತಾವವನ್ನು ಒಪ್ಪಿಕೊಂಡಿದ್ದಾನೆಂದು ಭಾವಿಸತಕ್ಕದ್ದು.

(3) 14ನೇ ಪ್ರಕರಣದ ಉಪಬಂಧಗಳು ಯಥೋಚಿತ ವ್ಯತ್ಯಾಸಗಳೊಂದಿಗೆ ಈ ಪ್ರಕರಣದ ಅಡಿಯಲ್ಲಿ ಪರಿಚಲನೆ ಮೂಲಕ ಕೈಕೊಂಡ ಪ್ರಾಧಿಕಾರದ ತೀರ್ಮಾನಗಳಿಗೆ ಅನ್ವಯವಾಗತಕ್ಕದ್ದು.

**17. ಕೆಲವು ತೀರ್ಮಾನಗಳನ್ನು ಕೈಗೊಳ್ಳಲು ಅಧ್ಯಕ್ಷನ ಅಧಿಕಾರ.**-(1) ಯಾವೊಂದು ವಿಷಯವು 14ನೇ ಪ್ರಕರಣದ ಅಡಿಯಲ್ಲಿ ಪ್ರಾಧಿಕಾರದ ಸಭೆಗಾಗಿ ಅಥವಾ 16ನೇ ಪ್ರಕರಣದ ಅಡಿಯಲ್ಲಿ ಪರಿಚಲನೆ ಮಾಡುವ ಮೂಲಕ ಪ್ರಾಧಿಕಾರವು ತೀರ್ಮಾನ ಕೈಗೊಳ್ಳುವವರೆಗೂ ಕಾಯಲು ಸಾಧ್ಯವಾಗದಷ್ಟು ತುರ್ತು ಸ್ವರೂಪದ್ದಾಗಿದೆಯೆಂದು ಅಧ್ಯಕ್ಷನು ಭಾವಿಸಿದರೆ, ಆತನು ಯುಕ್ತವೆಂದು ಭಾವಿಸುವ ಅಂಥ ಆದೇಶಗಳನ್ನು ಜಾರಿಗೊಳಿಸಬಹುದು ಮತ್ತು ಅದನ್ನು ಪ್ರಾಧಿಕಾರದ ನಿರ್ಣಯಗಳ ರೀತಿಯಲ್ಲಿಯೇ ಅನುಷ್ಠಾನಗೊಳಿಸತಕ್ಕದ್ದು:

ಪರಂತು ಈ ಪ್ರಕರಣದ ಅಡಿಯಲ್ಲಿ ಅಧ್ಯಕ್ಷನು ಹಾಗೆ ಕೈಗೊಂಡ ಪ್ರತಿಯೊಂದು ನಿರ್ಣಯವನ್ನು ಪ್ರಾಧಿಕಾರದ ಮುಂದೆ ಅದರ ಮುಂದಿನ ಸಭೆಯಲ್ಲಿ ಮಂಡಿಸತಕ್ಕದ್ದು.

## ಅಧ್ಯಾಯ – III

**18. ಪಾರಂಪರಿಕ ತಾಣಗಳು.**- (1) ಯಾವುದೇ ಪದ್ಧತಿ, ಸಂಪ್ರದಾಯ, ರೂಢಿಯಲ್ಲಿ ಅಥವಾ ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಅಡಿಯಲ್ಲಿ ಸೃಜಿಸಲಾದ ಮತ್ತು ಅಸ್ತಿತ್ವದಲ್ಲಿರುವ ಯಾವುದೇ ನ್ಯಾಸದ ನಿಬಂಧನೆಗಳಲ್ಲಿ ಏನೇ ಇದ್ದರೂ, ಅನುಸೂಚಿಯಲ್ಲಿ ನಿರ್ದಿಷ್ಟಪಡಿಸಿದ ಬನವಾಸಿಯಲ್ಲಿನ ಎಲ್ಲ ಅಥವಾ ಯಾವುದೇ ಪಾರಂಪರಿಕ ತಾಣಗಳ ಸಂಪೂರ್ಣ ನಿಯಂತ್ರಣ, ಮಾಲೀಕತ್ವ, ನಿರ್ವಹಣೆ ಮತ್ತು ಮೇಲ್ವಿಚಾರಣೆಯು, ರಾಜ್ಯ ಸರ್ಕಾರದಲ್ಲಿ ನಿಹಿತವಾಗಿರತಕ್ಕದ್ದು ಮತ್ತು ಅಗತ್ಯವಿದ್ದಲ್ಲಿ, ರಾಜ್ಯ ಸರ್ಕಾರವು, ನ್ಯಾಯಸಮ್ಮತ ಪರಿಹಾರ ಮತ್ತು ಭೂ ಆರ್ಜನೆಯಲ್ಲಿ ಪಾರದರ್ಶಕತೆಯ ಹಕ್ಕು (ಪುನರ್ವಸತಿ ಮತ್ತು ಪುನರ್ವ್ಯವಸ್ಥೆ) ಅಧಿನಿಯಮ, 2013ರ (2013ರ ಕೇಂದ್ರ ಅಧಿನಿಯಮ 30) ಹಾಗೂ ಅದರಡಿಯಲ್ಲಿ ರಚಿಸಿದ ನಿಯಮಗಳ ಅನುಸಾರವಾಗಿ ಆರ್ಜಿಸತಕ್ಕದ್ದು, ಮತ್ತು ತದನಂತರ ಅದನ್ನು ರಾಜ್ಯ ಸರ್ಕಾರವು ಅಧಿಸೂಚಿಸಿದ ದಿನಾಂಕದಿಂದ ಪ್ರಾಧಿಕಾರಕ್ಕೆ ವರ್ಗಾಯಿಸತಕ್ಕದ್ದು.

(2) ರಾಜ್ಯ ಸರ್ಕಾರದ, ಅಭಿಪ್ರಾಯದಲ್ಲಿ ತಾತ್ಕಾಲಿಕ ಉಪಬಂಧಗಳನ್ನು ಕಲ್ಪಿಸುವುದು ಅವಶ್ಯವಾಗಿದ್ದರೆ, ಅದು ಸಾಮಾನ್ಯ ಅಥವಾ ವಿಶೇಷ ಆದೇಶದ ಮೂಲಕ ಹಾಗೆ ಮಾಡಬಹುದು.

**19. ಅನುಸೂಚಿಯನ್ನು ತಿದ್ದುಪಡಿ ಮಾಡುವ ಅಧಿಕಾರ.**– ರಾಜ್ಯ ಸರ್ಕಾರವು, ಅಧಿಸೂಚನೆಯ ಮೂಲಕ ನಿಯಮಿಸಬಹುದಾದ ಅಂಥ ಕಾರ್ಯವಿಧಾನವನ್ನು ಅನುಸರಿಸಿದ ತರುವಾಯ, ಅನುಸೂಚಿಯಲ್ಲಿ ಯಾವುದೇ ನಮೂದನ್ನು ಸೇರಿಸಿ ಅಥವಾ ಮಾರ್ಪಡಿಸಿ ಅದನ್ನು ತಿದ್ದುಪಡಿ ಮಾಡಬಹುದು.

**20. ಅಭಿವೃದ್ಧಿ ಯೋಜನೆಯನ್ನು ಸಿದ್ಧಪಡಿಸುವುದು, ಅದರ ಅನುಮೋದನೆ ಹಾಗೂ ಅದನ್ನು ಕಾರ್ಯಗತಗೊಳಿಸುವುದು.**- (1) ಪ್ರಾಧಿಕಾರವು, ಅದರ ರಚನೆಯಾದ ಮೇಲೆ, ಆದಷ್ಟು ಬೇಗನೆ, ಬನವಾಸಿಯನ್ನು ಅಂತಾರಾಷ್ಟ್ರೀಯ ಯಾತ್ರಾ ಸ್ಥಳವನ್ನಾಗಿ, ಸಾಂಸ್ಕೃತಿಕ ಹಾಗೂ ಪ್ರವಾಸಿ ಕೇಂದ್ರವನ್ನಾಗಿ ಮತ್ತು ಆದಿಕವಿ ಪಂಪ ಮತ್ತು ಆತನ ಸಮಕಾಲೀನರ ಮತ್ತು ಶಿಷ್ಯವೃಂದದ ಸಿದ್ಧಾಂತಗಳ ಚರ್ಚೆ ಹಾಗೂ ಪ್ರಚಾರದ ಕೇಂದ್ರವನ್ನಾಗಿ ಮಾಡಿ ಅದನ್ನು ಅಭಿವೃದ್ಧಿಗೊಳಿಸಲು ಯೋಜನೆಯನ್ನು ಸಿದ್ಧಪಡಿಸತಕ್ಕದ್ದು. ಅಭಿವೃದ್ಧಿ ಯೋಜನೆಯು ಈ ಮುಂದಿನವುಗಳನ್ನು ಒಳಗೊಂಡಿರತಕ್ಕದ್ದು, ಎಂದರೆ:–

(ಎ) ಯಾವುದೇ ಪಾರಂಪರಿಕ ತಾಣ ಅಥವಾ ನಿರ್ಮಿತಿಯ ಸಂರಕ್ಷಣೆ ಮತ್ತು ಪುನರ್‌ನಿರ್ಮಾಣ ಹಾಗೂ ಅದರ ನಿರ್ವಹಣೆಗಾಗಿ ಕಾರ್ಯಕ್ರಮಗಳು;

(ಬಿ) ಪ್ರಾಧಿಕಾರದ ಅಭಿಪ್ರಾಯದಲ್ಲಿ ಅಭಿವೃದ್ಧಿ ಯೋಜನೆಯನ್ನು ಕಾರ್ಯಗತಗೊಳಿಸಲು ಅವಶ್ಯವಾದ ಭೂಮಿಯನ್ನು ಆರ್ಜನೆ ಅಥವಾ ಖರೀದಿಯ ಮೂಲಕ, ವಿನಿಯಮ ಅಥವಾ ಅನ್ಯಥಾ ರೀತಿಯಲ್ಲಿ ಆರ್ಜಿಸುವುದಕ್ಕಾಗಿ ಪ್ರಸ್ತಾವಗಳು;

(ಸಿ) ಸಾರ್ವಜನಿಕ ಉದ್ಯಾನವನಗಳು, ತೋಟಗಾರಿಕಾ ಅಥವಾ ಪ್ರಾಣಿಜೈವಿಕ ಉದ್ಯಾನಗಳು, ಚಿಲುಮೆಗಳಿರುವ ವನಗಳು, ಕೃತಕ ಜಲಪಾತಗಳು, ಆಟದ ಉದ್ಯಾನವನಗಳು, ದೋಣಿ ವಿಹಾರದ ಅಥವಾ ಇತರ ಜಲಕ್ರೀಡೆಯ ಸರೋವರಗಳನ್ನು ಅಥವಾ ಅಂಥ ಇತರ ಪ್ರವಾಸಿ ಆಕರ್ಷಣೆಗಳ ಉಂಟುಮಾಡುವಂಥವುಗಳನ್ನು ನಿರ್ಮಿಸುವುದು;

(ಡಿ) ಬೇರೆ ಬೇರೆ ವರ್ಗದ ಪ್ರವಾಸಿಗರಿಗಾಗಿ ಛತ್ರಗಳು, ವಸತಿ-ಗೃಹಗಳು, ಕಾಟೇಜುಗಳು, ಹೋಟೆಲುಗಳು, ರೆಸ್ಟೋರೆಂಟುಗಳು ಮತ್ತು ಊಟದ ಮನೆಗಳನ್ನು ನಿರ್ಮಿಸುವುದು;

(ಇ) ಅವಶ್ಯಕ ಅಂಗಡಿಗಳ ಸಾಲುಗಳನ್ನು ಅಥವಾ ಅಂಗಡಿ-ಸಂಕೀರ್ಣಗಳನ್ನು ನಿರ್ಮಿಸುವುದು;

(ಎಫ್) ಸಭಾಂಗಣದ ನಿರ್ಮಾಣ;

(ಜಿ) ಆಯಕಟ್ಟಿನ ಸ್ಥಳಗಳಲ್ಲಿ ಪ್ರಾರ್ಥನಾ ಮಂದಿರಗಳು ಮತ್ತು ಧ್ಯಾನಮಂದಿರಗಳ ನಿರ್ಮಾಣ;

(ಹೆಚ್) 2ನೇ ಪ್ರಕರಣದಲ್ಲಿ ಪರಿಭಾಷಿಸಲಾದಂತೆ ಸೌಕರ್ಯಗಳನ್ನು ಕಲ್ಪಿಸುವುದು;

(ಐ) ಚರಂಡಿ ವ್ಯವಸ್ಥೆ, ವಿದ್ಯುಚ್ಛಕ್ತಿ ಮತ್ತು ನೀರು ಪೂರೈಕೆ ಮತ್ತು ನೈರ್ಮಲ್ಯ ವ್ಯವಸ್ಥೆಯನ್ನು ಕಲ್ಪಿಸುವುದು;

(ಜೆ) ಪ್ರಾಧಿಕಾರ, ಸಾಧಾರಣವಾಗಿ ತನ್ನ ಯೋಜನಾ ಕಾರ್ಯಕ್ಕೆ ಅನುವಾಗುವಂತೆ ಮತ್ತು ಮುಖ್ಯವಾಗಿ ಉತ್ತಮ ಚರಂಡಿ ವ್ಯವಸ್ಥೆಯನ್ನು ಒದಗಿಸಲು, ಯಾವುದೇ ಭೂಮಿಯನ್ನು ಎತ್ತರಿಸುವುದು ಸೂಕ್ತವೆಂದು ಭಾವಿಸಿದರೆ ಅಂಥ ಭೂಮಿಯನ್ನು ಎತ್ತರಿಸುವುದು;

(ಕೆ) ಬನವಾಸಿ ಪ್ರದೇಶದಲ್ಲಿ ಅಥವಾ ಅದಕ್ಕೆ ಲಗತ್ತಾಗಿರುವ ಪ್ರದೇಶದಲ್ಲಿ ಉತ್ತಮ ಗಾಳಿ-ಬೆಳಕಿನ ವ್ಯವಸ್ಥೆಗಾಗಿ ಖಾಲಿ ಜಾಗಗಳನ್ನು ಬಿಡುವುದು;

(ಎಲ್) ಅಡಚಣೆಯನ್ನುಂಟುಮಾಡುವ ಕಟ್ಟಡಗಳನ್ನು ಅಥವಾ ಆ ಕಟ್ಟಡಗಳ ಭಾಗಗಳನ್ನು ಕೆಡಹುವುದು;

(ಎಂ) ಕಟ್ಟಡಗಳ ನಿರ್ಮಾಣ ಮತ್ತು ಪುನರ್‌ನಿರ್ಮಾಣ, ಅವುಗಳ ನಿರ್ವಹಣೆ ಮತ್ತು ಸಂರಕ್ಷಣೆ;

(ಎನ್) 24ನೇ ಪ್ರಕರಣದ ಉಪಬಂಧಗಳಿಗೆ ಒಳಪಟ್ಟು, ಯೋಜನೆಯಲ್ಲಿ ಒಳಗೊಂಡ ಯಾವುದೇ ಸ್ವತ್ತಿನ ಮಾರಾಟ, ಬಾಡಿಗೆಗೆ ನೀಡುವುದು ಅಥವಾ ವಿನಿಮಯ ಮಾಡುವುದು;

(ಒ) ಪ್ರಾಧಿಕಾರದ ಸಿಬ್ಬಂದಿಗೆ ವಾಸ್ತವ್ಯವನ್ನು ಒದಗಿಸುವುದು;

(ಪಿ) ಸಂಪರ್ಕ ಮತ್ತು ಸಾಗಣೆ ಸೌಲಭ್ಯಗಳಿಗಾಗಿ ಏರ್ಪಾಟು;

(ಕ್ಯು) ಅಭಿವೃದ್ಧಿ ಯೋಜನೆಯ ಭೌಗೋಳಿಕ ಪ್ರದೇಶದಲ್ಲಿ ಈಗಿರುವ ಮತೀಯ ಸಂಸ್ಥೆಗಳೊಂದಿಗೆ, ಅವು ಅಭಿವೃದ್ಧಿ ಯೋಜನೆಯ ಸ್ಕೀಮಿಗೆ ಸರಿಹೊಂದುವಷ್ಟರಮಟ್ಟಿಗೆ ಅವುಗಳನ್ನು ಮುಂದುವರಿಸಲು ಅನುಮತಿಸಬಹುದಾದಂಥ ಹೊಂದಾಣಿಕೆಗಳು ಮತ್ತು ಒಪ್ಪಂದಗಳನ್ನು ಮಾಡಿಕೊಳ್ಳುವುದು;

(ಆರ್) ಬನವಾಸಿ ಕ್ಷೇತ್ರವನ್ನು ಸಾಂಸ್ಕೃತಿಕ ಕೇಂದ್ರವನ್ನಾಗಿ, ಯಾತ್ರಾ ಸ್ಥಳವನ್ನಾಗಿ ಮತ್ತು ಅಂತರರಾಷ್ಟ್ರೀಯ ಪ್ರವಾಸಿ ಕೇಂದ್ರವನ್ನಾಗಿ ಮಾಡುವ ಮತ್ತು ಆದಿ ಕವಿ ಪಂಪ ಮಾತ್ರವಲ್ಲದೆ, ಆತನ ಸಮಕಾಲೀನರ ಸಾಹಿತ್ಯದ ಚರ್ಚೆ ಹಾಗೂ ಪ್ರಚಾರದ ಕೇಂದ್ರವನ್ನಾಗಿ ಮಾಡುವುದಕ್ಕಾಗಿ ಮತ್ತು ಆದಿ ಕವಿ ಪಂಪ ಮತ್ತು ಆತನ ಸಮಕಾಲೀನರ ಜೀವನ, ಮತ್ತು ಧರ್ಮಕ್ಕೆ ಸಂಬಂಧಪಟ್ಟ ಇತರ ಮಹತ್ವದ ಸ್ಥಳಗಳ ಸಂರಕ್ಷಣೆ ಹಾಗೂ ಅಭಿವೃದ್ಧಿಗಾಗಿ ಮತ್ತು ಅಧ್ಯಯನಕ್ಕೆ ಸಂಬಂಧಿಸಿದಂತೆ ಶಿಕ್ಷಣ ಮತ್ತು ಸಂಶೋಧನಾ ಕೇಂದ್ರದ ಸ್ಥಾಪನೆಗಾಗಿ ಹಾಗೂ ಆ ವಿಷಯದ ಬಗ್ಗೆ ವಿಶೇಷ ಗ್ರಂಥಾಲಯದ ಸ್ಥಾಪನೆಗಾಗಿ, ಯುಕ್ತ ಹಾಗೂ ಆನುಷಂಗಿಕವೆಂದು ಪ್ರಾಧಿಕಾರವು ಅಭಿಪ್ರಾಯಪಡುವಂಥ ಇತರ ಯಾವುದೇ ವಿಷಯ;

(ಎಸ್) ಪ್ರಾಧಿಕಾರದ ಪ್ರಾದೇಶಿಕ ಪರಿಮಿತಿಯೊಳಗಿನ ಯಾವುದೇ ಐತಿಹಾಸಿಕ ಮತ್ತು ಪಾರಂಪರಿಕ ಸ್ಥಳದಲ್ಲಿ ಮಣ್ಣಿನಲ್ಲಿ ಹೂತು ಹೋಗಿವೆ ಎಂದು ನಂಬಲಾದ ಪ್ರಾಚೀನ ಸ್ಮಾರಕಗಳು ಯಾವುದಾದರೂ ಇದ್ದರೆ ಅದನ್ನು ಭೂಮಿಯಿಂದ ತೆಗೆಯುವುದಕ್ಕಾಗಿ ಉತ್ಖನನ ಮತ್ತು ಪುರಾತತ್ವದ ಸ್ವರೂಪದ ಅನ್ವೇಷಣೆ:

ಪರಂತು, ಈ ಅಧಿನಿಯಮದಲ್ಲಿ ಇರುವುದು ಯಾವುದೂ, ಪ್ರಾಚೀನ ಸ್ಮಾರಕಗಳು ಮತ್ತು ಪುರಾತತ್ವ ಸ್ಥಳಗಳು ಮತ್ತು ಅವಶೇಷಗಳ ಅಧಿನಿಯಮ, 1958ರ (1958ರ ಕೇಂದ್ರ ಅಧಿನಿಯಮ ಸಂಖ್ಯೆ: 24) ಉಪಬಂಧಗಳನ್ನು ಅಧ್ಯಾರೋಹಿಸುತ್ತದೆಂದು ಭಾವಿಸತಕ್ಕದ್ದಲ್ಲ.

(2) (1)ನೇ ಉಪಪ್ರಕರಣದಡಿ ಸಿದ್ಧಪಡಿಸಲಾದ ಅಭಿವೃದ್ಧಿ ಯೋಜನೆಯನ್ನು, ಆಯುಕ್ತರು, ಅನುಮೋದನೆಗಾಗಿ ರಾಜ್ಯ ಸರ್ಕಾರಕ್ಕೆ ಕಳುಹಿಸಿಕೊಡತಕ್ಕದ್ದು. ರಾಜ್ಯ ಸರ್ಕಾರವು, ಯಾವುವೇ ಮಾರ್ಪಾಟುಗಳ ಸಹಿತವಾಗಿ ಅಥವಾ ಮಾರ್ಪಾಟುಗಳಿಲ್ಲದೆ ಯೋಜನೆಯನ್ನು ಅನುಮೋದಿಸಬಹುದು.

(3) (2)ನೇ ಉಪಪ್ರಕರಣದಡಿ ಅಭಿವೃದ್ಧಿ ಯೋಜನೆಯನ್ನು ಅನುಮೋದಿಸಿದ ತರುವಾಯ, ರಾಜ್ಯ ಸರ್ಕಾರವು, ಪ್ರಾಧಿಕಾರದ ಶಿಫಾರಸುಗಳ ಮೇಲೆ ಕಾಲ ಕಾಲಕ್ಕೆ ತಾನು ಅವಶ್ಯಕವೆಂದು ಭಾವಿಸುವಂಥ ಮಾರ್ಪಾಟುಗಳನ್ನು ಯೋಜನೆಯಲ್ಲಿ ಮಾಡಬಹುದು.

(4) ಈ ಪ್ರಕರಣದಡಿ ರಾಜ್ಯ ಸರ್ಕಾರವು ಅನುಮೋದಿಸಿದ ಅಭಿವೃದ್ಧಿ ಯೋಜನೆಗಳನ್ನು ಕಾರ್ಯಗತಗೊಳಿಸುವುದಕ್ಕಾಗಿ ಕಾಮಗಾರಿಗಳನ್ನು ಕೈಗೊಳ್ಳುವ ಮತ್ತು ವೆಚ್ಚವನ್ನು ವಹಿಸುವ ಅಧಿಕಾರವನ್ನು ಪ್ರಾಧಿಕಾರವು ಹೊಂದಿರತಕ್ಕದ್ದು.

**21. ಬನವಾಸಿ ಪಾರಂಪರಿಕ ತಾಣಗಳ ನಿರ್ವಹಣೆ.–** ರಾಜ್ಯ ಸರ್ಕಾರವು, ಪ್ರಾಧಿಕಾರದ ಶಿಫಾರಸುಗಳ ಮೇಲೆ ಅಥವಾ ಅನ್ಯಥಾ, ಬನವಾಸಿಯೂ ಸೇರಿದಂತೆ ಪ್ರಾಧಿಕಾರದ ಸ್ವತ್ತುಗಳನ್ನು ಬಳಸಿಕೊಳ್ಳಬಹುದು ಎಂಬ ರೀತಿಯನ್ನು, ಬನವಾಸಿ ಮತ್ತು ಪಾರಂಪರಿಕ ತಾಣಗಳಿಗೆ ಬರುವ ಭಕ್ತಾದಿಗಳು, ಯಾತ್ರಾರ್ಥಿಗಳು, ಪ್ರವಾಸಿಗಳು ಮತ್ತು ಇತರ ಸಂದರ್ಶಕರು ಬಳಸಿಕೊಳ್ಳಬಹುದಾದ ಹಲವಾರು ಸೌಲಭ್ಯಗಳಿಗಾಗಿ ಅವರಿಂದ ವಸೂಲು ಮಾಡಬಹುದಾದ ದರಗಳು, ಶುಲ್ಕಗಳು ಅಥವಾ ಇತರ ವೆಚ್ಚಗಳನ್ನು ಮತ್ತು ಪರಂಪರೆಯ ತಾಣಗಳ ಆವರಣಗಳಿಂದ ವ್ಯಕ್ತಿಗಳನ್ನು ಹೊರಹಾಕುವ ಅಧಿಕಾರಗಳು, ಬಾಡಿಗೆ ಅಥವಾ ನಷ್ಟ ಪರಿಹಾರವನ್ನು ಭೂ ಕಂದಾಯದ ಬಾಕಿಯಂತೆ ವಸೂಲು ಮಾಡುವ ಅಧಿಕಾರ ಇತ್ಯಾದಿ ಇನ್ನಿತರ ವಿಷಯಗಳಿಗಾಗಿ ಒಳಗೊಂಡಂತೆ ಬನವಾಸಿ ಪಾರಂಪರಿಕ ತಾಣಗಳ ನಿರ್ವಹಣೆಗಾಗಿ ಯಾವ ರೀತಿಯಲ್ಲಿ ಪಾರಂಪರಿಕ ತಾಣಗಳನ್ನು ಮೂಲಕ ಉಪಬಂಧ ಕಲ್ಪಿಸತಕ್ಕದ್ದು.

**22. ಪ್ರಾಧಿಕಾರಕ್ಕೆ ರಾಜ್ಯ ಸರ್ಕಾರದ ಅಧಿಕಾರಗಳ ಪ್ರತ್ಯಾಯೋಜನೆ.–** ಕರ್ನಾಟಕ ಪುರಾತತ್ವ ಮತ್ತು ಐತಿಹಾಸಿಕ ಸ್ಮಾರಕಗಳು ಮತ್ತು ಪ್ರಾಚ್ಯವಸ್ತು ಸ್ಥಳಗಳು ಹಾಗೂ ಅವಶೇಷಗಳ ಅಧಿನಿಯಮ, 1961ರಲ್ಲಿ (1962ರ ಕರ್ನಾಟಕ ಅಧಿನಿಯಮ ಸಂಖ್ಯೆ 7) ಏನೇ ಇದ್ದರೂ, ರಾಜ್ಯ ಸರ್ಕಾರವು, ಅಧಿಸೂಚನೆಯ ಮೂಲಕ, ಅದು ಚಲಾಯಿಸಬಹುದಾದ ಅದರ ಅಧಿಕಾರಗಳನ್ನು ಪ್ರಾಧಿಕಾರಕ್ಕೆ ಪ್ರತ್ಯಾಯೋಜಿಸಬಹುದು ಮತ್ತು ಅಂಥ ಅಧಿಸೂಚನೆಯನ್ನು ಹೊರಡಿಸಿದ ನಂತರ, ಪ್ರಾಧಿಕಾರವು, ಅಧಿಸೂಚನೆಯಲ್ಲಿ ನಿರ್ದಿಷ್ಟಪಡಿಸಬಹುದಾದ ಅಂಥ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಮತ್ತು ಅಂಥ ಪ್ರಕಾರ್ಯಗಳನ್ನು ನೆರವೇರಿಸತಕ್ಕದ್ದು ಮತ್ತು ಪರಂಪರೆಯ ತಾಣಗಳ ಆವರಣಗಳಿಂದ ವ್ಯಕ್ತಿಗಳನ್ನು ಹೊರಹಾಕುವ ಅಧಿಕಾರಗಳು, ಬಾಡಿಗೆ ಅಥವಾ ನಷ್ಟ ಪರಿಹಾರವನ್ನು ಭೂ

ಕಂದಾಯದ ಬಾಕಿಯಂತೆ ವಸೂಲು ಮಾಡುವ ಅಧಿಕಾರ ಇತ್ಯಾದಿ ಇನ್ನಿತರ ವಿಷಯಗಳನ್ನು ಒಳಗೊಂಡಂತೆ ಬನವಾಸಿ ಪಾರಂಪರಿಕ ತಾಣಗಳ ನಿರ್ವಹಣೆಗಾಗಿ ಯಾವ ರೀತಿಯಲ್ಲಿ ಪಾರಂಪರಿಕ ತಾಣಗಳನ್ನು ನಿರ್ವಹಿಸುವುದಕ್ಕಾಗಿ ಉಪಬಂಧ ಕಲ್ಪಿಸಬಹುದು.

**23. ಕರ್ನಾಟಕ ಸಾರ್ವಜನಿಕ ಆವರಣಗಳ (ಅನಧಿಕೃತ ಅಧಿಭೋಗದಾರರನ್ನು ಹೊರಹಾಕುವ) ಅಧಿನಿಯಮ, 1974ನ್ನು ಪ್ರಾಧಿಕಾರದ ಆವರಣಗಳಿಗೆ ಅನ್ವಯಿಸುವುದು.**–(1) ರಾಜ್ಯ ಸರ್ಕಾರವು; (2)ನೇ ಉಪಪ್ರಕರಣದ ಉಪಬಂಧಗಳಿಗೆ ಒಳಪಟ್ಟು, ಅಧಿಸೂಚನೆಯ ಮೂಲಕ, ಅಧಿಸೂಚನೆಯಲ್ಲಿ ನಿರ್ದಿಷ್ಟಪಡಿಸಬಹುದಾದ ಅಂಥ ದಿನಾಂಕದಿಂದ ಕರ್ನಾಟಕ ಸಾರ್ವಜನಿಕ ಆವರಣಗಳ (ಅನಧಿಕೃತ ಅಧಿಭೋಗದಾರರನ್ನು ಹೊರಹಾಕುವ) ಅಧಿನಿಯಮ, 1974ನ್ನು 1974ರ ಕರ್ನಾಟಕ ಅಧಿನಿಯಮ ಸಂಖ್ಯೆ 32) ಸಾರ್ವಜನಿಕ ಆವರಣಗಳಿಗೆ ಸಂಬಂಧಿಸಿ ಅನ್ವಯಿಸುವಂತೆ ಪ್ರಾಧಿಕಾರಕ್ಕೆ ಸೇರಿದ, ಅದರಲ್ಲಿ ನಿಹಿತವಾದ ಅಥವಾ ಅದು ಗುತ್ತಿಗೆಗೆ ತೆಗೆದುಕೊಂಡ ಆವರಣಕ್ಕೆ ಅನ್ವಯಿಸತಕ್ಕದ್ದೆಂದು ಉಪಬಂಧ ಕಲ್ಪಿಸಬಹುದು.

(2) (1)ನೇ ಉಪಪ್ರಕರಣದ ಅಡಿಯಲ್ಲಿ ಅಧಿಸೂಚನೆಯನ್ನು ಹೊರಡಿಸಿದ ತರುವಾಯ, ಮೇಲ್ಕಂಡ ಅಧಿನಿಯಮ ಮತ್ತು ಅದರಡಿ ರಚಿಸಿದ ನಿಯಮಗಳು ಈ ಮುಂದಿನ ಮಾರ್ಪಾಡುಗಳೊಡನೆ ಪ್ರಾಧಿಕಾರಕ್ಕೆ ಸೇರಿದ ಆವರಣಗಳಿಗೆ ಅನ್ವಯಿಸತಕ್ಕದ್ದು, ಎಂದರೆ:–

(ಎ) ರಾಜ್ಯ ಸರ್ಕಾರವು, ಅದು ಸೂಕ್ತವೆಂದು ಭಾವಿಸುವಂತೆ, ರಾಜ್ಯ ಸರ್ಕಾರದ ಅಥವಾ ಪ್ರಾಧಿಕಾರದ ಒಬ್ಬ ಅಧಿಕಾರಿಯನ್ನು ಮೇಲ್ಕಂಡ ಅಧಿನಿಯಮದ ಉದ್ದೇಶಗಳಿಗಾಗಿ ಸಕ್ಷಮ ಅಧಿಕಾರಿಯೆಂದು ನೇಮಿಸಬಹುದು.

(ಬಿ) ಆ ಅಧಿನಿಯಮದಲ್ಲಿ ಮತ್ತು ಅದರಡಿಯಲ್ಲಿ ರಚಿಸಿದ ನಿಯಮಗಳಲ್ಲಿ "ಸಾರ್ವಜನಿಕ ಆವರಣಗಳಿಗೆ" ಮಾಡಿದ ಉಲ್ಲೇಖಗಳನ್ನು ಪ್ರಾಧಿಕಾರದ ಆವರಣಗಳಿಗೆ ಮಾಡಿದ ಉಲ್ಲೇಖಗಳೆಂದು ಭಾವಿಸತಕ್ಕದ್ದು, ಮತ್ತು ಆ ಅಧಿನಿಯಮದ 6, 7, 8, 14, 15, 16 ಮತ್ತು 17ನೇ ಪ್ರಕರಣಗಳಲ್ಲಿ "ರಾಜ್ಯ ಸರ್ಕಾರಕ್ಕೆ" ಮಾಡಿದ ಉಲ್ಲೇಖಗಳನ್ನು ಪ್ರಾಧಿಕಾರಕ್ಕೆ ಮಾಡಿದ ಉಲ್ಲೇಖಗಳೆಂದು ಭಾವಿಸತಕ್ಕದ್ದು.

**24. ಪ್ರವಾಸೋದ್ಯಮಕ್ಕೆ ಮತ್ತು ಯಾತ್ರೆ ಕೈಗೊಳ್ಳುವುದಕ್ಕೆ ಪ್ರಾಧಿಕಾರವು ಉತ್ತೇಜನ ನೀಡುವುದು.**– ಈ ಪಾರಂಪರಿಕ ತಾಣಗಳಿಗೆ ಸಾಕಷ್ಟು ಪ್ರಚಾರಗಳನ್ನು ನೀಡಲು ಪ್ರವಾಸೋದ್ಯಮ, ಸಂಸ್ಕೃತಿ, ಚರಿತ್ರೆ ಮತ್ತು ಯಾತ್ರೆಗೆ ಉತ್ತೇಜನ ನೀಡುವುದಕ್ಕಾಗಿ, ಪ್ರಾಧಿಕಾರವು ಕಾರ್ಯಕ್ರಮಗಳನ್ನು ಮತ್ತು ಕಾರ್ಯಚಟುವಟಿಕೆಗಳನ್ನು ವ್ಯವಸ್ಥೆ ಮಾಡಬಹುದು. ಅಂಥ ಕಾರ್ಯಕ್ರಮಗಳು ಈ ಮುಂದಿನವುಗಳನ್ನು ಒಳಗೊಂಡಿರತಕ್ಕದ್ದು,–

(ಎ) ಕದಂಬೋತ್ಸವ;

(ಬಿ) ಕಲಾ ಪ್ರದರ್ಶನಗಳು ಮತ್ತು ಮಾರಾಟಗಳು;

(ಸಿ) ಸಮ್ಮೇಳನಗಳು, ವಿಚಾರಗೋಷ್ಠಿಗಳು, ಕಾರ್ಯಾಗಾರಗಳು; ಮತ್ತು

(ಡಿ) ವಾರ್ಷಿಕ ಜಾತ್ರೆಗಳು ಮತ್ತು ವಿಶೇಷ ಸ್ವರೂಪದ ಉತ್ಸವಗಳು.

**25. ಅಧಿಕಾರಗಳ ಪ್ರತ್ಯಾಯೋಜನೆ.**– (1) 46ನೇ ಪ್ರಕರಣದ ಅಡಿಯಲ್ಲಿ ನಿಯಮಗಳನ್ನು ರಚಿಸುವ ಅಧಿಕಾರವನ್ನು ಹೊರತುಪಡಿಸಿ, ರಾಜ್ಯ ಸರ್ಕಾರವು, ಅಧಿಸೂಚನೆಯ ಮೂಲಕ, ಈ ಅಧಿನಿಯಮದ ಮೂಲಕ ಅಥವಾ ಅದರ ಅಡಿಯಲ್ಲಿ ಅದಕ್ಕೆ ಪ್ರದತ್ತವಾದ ಯಾವುವೇ ಅಧಿಕಾರಗಳನ್ನು ಯಾವುದೇ ಇತರ ಪ್ರಾಧಿಕಾರಕ್ಕೆ ಪ್ರತ್ಯಾಯೋಜಿಸಬಹುದು.

(2) 44ನೇ ಪ್ರಕರಣದ ಅಡಿಯಲ್ಲಿ ವಿನಿಯಮಗಳನ್ನು ರಚಿಸುವ ಅಧಿಕಾರವನ್ನು ಹೊರತುಪಡಿಸಿ, ಪ್ರಾಧಿಕಾರವು, ವಿನಿಯಮಗಳ ಮೂಲಕ, ಈ ಅಧಿನಿಯಮದ ಮೂಲಕ ಅಥವಾ ಅದರ ಅಡಿಯಲ್ಲಿ ತನಗೆ ಪ್ರದತ್ತವಾದ ಯಾವುದೇ ಅಧಿಕಾರಗಳನ್ನು, ಆಯುಕ್ತನಿಗೆ ಅಥವಾ ಪ್ರಾಧಿಕಾರದ ಇತರ ಅಧಿಕಾರಿಗಳಿಗೆ ಪ್ರತ್ಯಾಯೋಜಿಸಬಹುದು.

## ಅಧ್ಯಾಯ – IV
## ಹಣಕಾಸು ಮತ್ತು ಸ್ವತ್ತು

**26. ಪ್ರಾಧಿಕಾರದ ನಿಧಿ.**– (1) ಬನವಾಸಿ ಅಭಿವೃದ್ಧಿ ಪ್ರಾಧಿಕಾರ ನಿಧಿಯೆಂದು ಕರೆಯಲಾಗುವ ಒಂದು ನಿಧಿಯು ಇರತಕ್ಕದ್ದು.

(2) ಸದರಿ ನಿಧಿಗೆ,–

(i) ಕೇಂದ್ರ ಸರ್ಕಾರ, ರಾಜ್ಯ ಸರ್ಕಾರ, ಯಾವುದೇ ಸ್ಥಳೀಯ ಪ್ರಾಧಿಕಾರ ಅಥವಾ ನಿಗಮಿತವಾದ ಇಲ್ಲವೇ ನಿಗಮಿತವಲ್ಲದ ಯಾವುದೇ ನಿಕಾಯ ಅಥವಾ ಯಾವೊಬ್ಬ ವ್ಯಕ್ತಿಯು ನೀಡಿದ ಎಲ್ಲ ಅನುದಾನಗಳು, ಧನ ಸಹಾಯ, ದೇಣಿಗೆಗಳು ಮತ್ತು ದಾನಗಳನ್ನು;

(ii) ಪ್ರಾಧಿಕಾರವು ಸಾಲ ಪಡೆದ ಮೊಬಲಗನ್ನು ; ಮತ್ತು

(iii) ಯಾವುದೇ ಮೂಲದಿಂದಾಗಲಿ, ಪ್ರಾಧಿಕಾರವು ಅಥವಾ ಪ್ರಾಧಿಕಾರದ ಪರವಾಗಿ ಪಡೆದುಕೊಂಡ ಇತರ ಎಲ್ಲಾ ಮೊತ್ತಗಳನ್ನು – ಜಮೆ ಮಾಡತಕ್ಕದ್ದು;

(3) ರಾಜ್ಯ ಸರ್ಕಾರವು ಅನ್ಯಥಾ ನಿರ್ದೇಶಿಸಿದ ಹೊರತು, ನಿಧಿಗೆ ಜಮೆ ಮಾಡಲಾದ ಎಲ್ಲ ಹಣವನ್ನು ಯಾವುದೇ ಅನುಸೂಚಿತ ಬ್ಯಾಂಕಿನಲ್ಲಿ ಅಥವಾ ರಾಜ್ಯ ಸರ್ಕಾರದ ಖಜಾನೆಯಲ್ಲಿ ಇರಿಸತಕ್ಕದ್ದು.

(4) ಪ್ರಾಧಿಕಾರದ ಆಯುಕ್ತನಿಗೆ ಮತ್ತು ಇತರ ಅಧಿಕಾರಿಗಳಿಗೆ ಮತ್ತು ನೌಕರರಿಗೆ ಸಂದಾಯನೀಯ ವೇತನಗಳು, ಭತ್ಯೆಗಳು ಮತ್ತು ನಿವೃತ್ತಿ ವೇತನವೇನಾದರೂ ಇದ್ದಲ್ಲಿ, ಅದನ್ನೂ ಒಳಗೊಂಡಂತೆ ಪ್ರಾಧಿಕಾರದ ಆಡಳಿತಾತ್ಮಕ ವೆಚ್ಚಗಳನ್ನು ಪ್ರಾಧಿಕಾರದ ನಿಧಿಯಿಂದ ಭರಿಸತಕ್ಕದ್ದು.

**27. ನಿಧಿಯ ಬಳಕೆ.–** ನಿಧಿಯನ್ನು ಮತ್ತು ಪ್ರಾಧಿಕಾರವು ಹೊಂದಿರುವ ಅಥವಾ ಅದರಲ್ಲಿ ನಿಹಿತವಾಗಿರುವ ಎಲ್ಲ ಸ್ವತ್ತನ್ನು ಈ ಅಧಿನಿಯಮದ ಉದ್ದೇಶಗಳನ್ನು ನೆರವೇರಿಸುವುದಕ್ಕಾಗಿ ಬಳಸತಕ್ಕದ್ದು.

**28. ರಾಜ್ಯ ಸರ್ಕಾರದಿಂದ ಅನುದಾನ.–** ರಾಜ್ಯ ಸರ್ಕಾರವು, ಪ್ರಾಧಿಕಾರವು ತನ್ನದೇ ಸಂಪನ್ಮೂಲಗಳಿಂದ ಸ್ವಯಂ ನಿರ್ವಹಣೆ ಮಾಡಿಕೊಳ್ಳುವ ಹಂತವನ್ನು ತಲುಪುವವರೆಗೆ ಮತ್ತು ಪಾರಂಪರಿಕ ತಾಣಗಳ ಅಭಿವೃದ್ಧಿಗಾಗಿ ಕಾಲಕಾಲಕ್ಕೆ ಸಹಾಯಾನುದಾನವನ್ನು ನೀಡಲು ಸಹ ಪ್ರಾಧಿಕಾರದ ಆಡಳಿತಾತ್ಮಕ ವೆಚ್ಚಗಳಿಗೆ ಸಮನಾದ ಮೊತ್ತವನ್ನು ಪ್ರತಿ ವರ್ಷವೂ ಪ್ರಾಧಿಕಾರಕ್ಕೆ ಅನುದಾನದ ರೂಪದಲ್ಲಿ ನೀಡತಕ್ಕದ್ದು.

**29. ಪ್ರಾಧಿಕಾರದ ಆಯವ್ಯಯ.–** (1) ಪ್ರಾಧಿಕಾರವು, ಪ್ರತಿ ವರ್ಷವೂ, ನಿಯಮಿಸಬಹುದಾದಂತಹ ದಿನಾಂಕಕ್ಕೆ ಮೊದಲು ಮತ್ತು ಅಂತಹ ನಮೂನೆಯಲ್ಲಿ ಮುಂಬರುವ ಏಪ್ರಿಲ್ ಒಂದನೆಯ ದಿನಾಂಕದಂದು ಪ್ರಾರಂಭವಾಗುವ ಹಣಕಾಸು ವರ್ಷಕ್ಕಾಗಿ ಅದರ ಆದಾಯ ಮತ್ತು ವೆಚ್ಚದ ಆಯವ್ಯಯ ಅಂದಾಜನ್ನು ಸಿದ್ಧಪಡಿಸತಕ್ಕದ್ದು ಮತ್ತು ರಾಜ್ಯ ಸರ್ಕಾರಕ್ಕೆ ಮಂಜೂರಾತಿಗಾಗಿ ಕಳುಹಿಸತಕ್ಕದ್ದು. ಅವಶ್ಯವಾದರೆ, ಯಾವುದೇ ಹಣಕಾಸು ವರ್ಷದ ಅವಧಿಯಲ್ಲಿ ಪ್ರಾಧಿಕಾರವು ಪೂರಕ ಆಯವ್ಯಯ ಅಂದಾಜುಗಳನ್ನು ಸಹ ಸಿದ್ಧಪಡಿಸಬಹುದು.

(2) ರಾಜ್ಯ ಸರ್ಕಾರವು, ಈ ಆಯವ್ಯಯ ಅಂದಾಜುಗಳನ್ನು ಮತ್ತು ಪೂರಕ ಬಜೆಟ್ ಅಂದಾಜುಗಳನ್ನು ಅವುಗಳಲ್ಲಿ ಮಾರ್ಪಾಡುಗಳನ್ನು ಮಾಡಿ ಅಥವಾ ಮಾಡದೇ ಅನುಮೋದಿಸತಕ್ಕದ್ದು.

(3) ಅತ್ಯಂತ ತುರ್ತು ಸನ್ನಿವೇಶಗಳಲ್ಲಿ, ಒಂದು ಹಣಕಾಸು ವರ್ಷದಲ್ಲಿ ಐದು ಲಕ್ಷ ರೂಪಾಯಿಗಳಿಗೆ ಮೀರದಂತೆ ವೆಚ್ಚವನ್ನು, ಅಂತಹ ವೆಚ್ಚವನ್ನು (2)ನೇ ಉಪಪ್ರಕರಣದಡಿ ರಾಜ್ಯ ಸರ್ಕಾರವು ಅನುಮೋದಿಸಿದ ವಾರ್ಷಿಕ ಅಥವಾ ಪೂರಕ ಆಯವ್ಯಯ ಅಂದಾಜಿನಲ್ಲಿ ಸೇರಿಸಿಲ್ಲದಿದ್ದಾಗ್ಯೂ ಭರಿಸಲು ಆಯುಕ್ತನು ಸಕ್ಷಮರಾಗಿರತಕ್ಕದ್ದು.

(4) ಆಯುಕ್ತನು ಒಂದು ಬಾರಿಗೆ ಒಂದು ಲಕ್ಷ ರೂಪಾಯಿಗಳ ಗರಿಷ್ಠ ಮಿತಿಗೆ ಒಳಪಟ್ಟು ವೆಚ್ಚದ ಒಂದು ಘಟಕದಿಂದ ಇನ್ನೊಂದು ಘಟಕ್ಕೆ ನಿಧಿಗಳ ಪುನರ್‌ವಿನಿಯೋಗ ಮಾಡುವ ಅಧಿಕಾರವನ್ನೂ ಹೊಂದಿರತಕ್ಕದ್ದು.

**30. ಲೆಕ್ಕಪತ್ರಗಳು ಮತ್ತು ಲೆಕ್ಕಪರಿಶೋಧನೆ.–** (1) ಆಯುಕ್ತನು, ನಿಯಮಿಸಬಹುದಾದಂಥ ಲೆಕ್ಕಪತ್ರಗಳ ಪುಸ್ತಕಗಳನ್ನು ಮತ್ತು ಇತರ ರಿಜಿಸ್ಟರುಗಳನ್ನು ನಿರ್ವಹಿಸುವಂತೆ ಮಾಡತಕ್ಕದ್ದು ಮತ್ತು ನಿಯಮಿಸಲಾದ ವಿಧಾನದಲ್ಲಿ ವಾರ್ಷಿಕ ಲೆಕ್ಕಪತ್ರಗಳ ವಿವರ ಪಟ್ಟಿಯನ್ನು ಸಿದ್ಧಪಡಿಸಸತಕ್ಕದ್ದು.

(2) ಪ್ರಾಧಿಕಾರದ ಹಣಕಾಸು ವರ್ಷವು, ಪ್ರತಿ ಕ್ಯಾಲೆಂಡರ್ ವರ್ಷದ ಏಪ್ರಿಲ್ 1ನೇ ದಿನಾಂಕದಂದು ಪ್ರಾರಂಭವಾಗತಕ್ಕದ್ದು ಮತ್ತು ಮುಂಬರುವ ಕ್ಯಾಲೆಂಡರ್ ವರ್ಷದ ಮಾರ್ಚ್ 31ನೇ ದಿನದಂದು ಕೊನೆಗೊಳ್ಳತಕ್ಕದ್ದು.

(3) ನಿಯಂತ್ರಕರು, ರಾಜ್ಯ ಲೆಕ್ಕಪರಿಶೋಧನೆ ಮತ್ತು ಲೆಕ್ಕಪತ್ರಗಳ ಇಲಾಖೆ ಇವರು ವಾರ್ಷಿಕವಾಗಿ ಪ್ರಧಾಪ್ರಾಧಿಕಾರದ ಲೆಕ್ಕಪತ್ರಗಳನ್ನು ಲೆಕ್ಕಪರಿಶೋಧನೆಯನ್ನು ನಡೆಸತಕ್ಕದ್ದು. ಪ್ರಾಧಿಕಾರ ಅಥವಾ ರಾಜ್ಯ ಸರ್ಕಾರವು ಸಮವರ್ತಿ ಮತ್ತು ವಿಶೇಷ ಲೆಕ್ಕಪರಿಶೋಧನೆಗಾಗಿಯೂ ಸಹ ಆದೇಶಿಸಬಹುದು.

(4) ಲೆಕ್ಕಪರಿಶೋಧನೆಯ ಉದ್ದೇಶಗಳಿಗಾಗಿ, ಪ್ರಾಧಿಕಾರದ ಎಲ್ಲ ಲೆಕ್ಕಪತ್ರಗಳನ್ನು ಮತ್ತು ಇತರ ದಾಖಲೆಗಳನ್ನು ನೋಡುವ ಅವಕಾಶವನ್ನು ಹೊಂದಿರತಕ್ಕದ್ದು.

(5) ಪ್ರಾಧಿಕಾರವು, ಲೆಕ್ಕಪತ್ರಗಳ ವಾರ್ಷಿಕ ವಿವರ ಪಟ್ಟಿಯನ್ನು ಮತ್ತು ಲೆಕ್ಕಪರಿಶೋಧಕನ ವರದಿಯನ್ನು ಸ್ವೀಕರಿಸಿದ ತರುವಾಯ, ಸಾಧ್ಯವಾಗಬಹುದಾದಷ್ಟು ಬೇಗನೆ, ಪ್ರಾಧಿಕಾರವು ಅದರ ಸಭೆಯಲ್ಲಿ ಅದನ್ನು ಪರಿಶೀಲಿಸತಕ್ಕದ್ದು ಮತ್ತು ವಾರ್ಷಿಕ ಲೆಕ್ಕಪತ್ರಗಳ ವಿವರ ಪಟ್ಟಿಯನ್ನು ಹಾಗೂ ಲೆಕ್ಕಪರಿಶೋಧಕನ ವರದಿಯ ಪ್ರತಿಯನ್ನು, ಲೆಕ್ಕಪರಿಶೋಧಕನು ನೀಡಿದ ಅಭಿಪ್ರಾಯಗಳೇನಾದರೂ ಇದ್ದಲ್ಲಿ, ಅದಕ್ಕೆ ನೀಡಿದ ತನ್ನ ವಿವರಣೆಯನ್ನು ಮತ್ತು ಲೆಕ್ಕಪರಿಶೋಧಕನು ಸೂಚಿಸಿದ ಅಕ್ರಮತೆಗಳು ಅಥವಾ ಲೋಪದೋಷಗಳೇನಾದರೂ ಇದ್ದಲ್ಲಿ, ಅವುಗಳ ಪರಿಹಾರೋಪಾಯಕ್ಕಾಗಿ ಪ್ರಾಧಿಕಾರವು ಕೈಗೊಂಡ ಕ್ರಮದ ವಿವರಣೆಯೊಂದಿಗೆ ರಾಜ್ಯ ಸರ್ಕಾರಕ್ಕೆ ಕಳುಹಿಸತಕ್ಕದ್ದು.

(6) ರಾಜ್ಯ ಸರ್ಕಾರವು, ಲೆಕ್ಕ ಪರಿಶೋಧಕನ ವರದಿಯನ್ನು ಮತ್ತು (5)ನೇ ಉಪಪ್ರಕರಣದ ಅಡಿಯಲ್ಲಿ ಅದಕ್ಕೆ ಸಲ್ಲಿಸಲಾದ ಇತರ ದಸ್ತಾವೇಜುಗಳನ್ನು ಪರಿಶೀಲಿಸಿದ ನಂತರ, ಪ್ರಾಧಿಕಾರಕ್ಕೆ ಅದು ಸೂಕ್ತವೆಂದು ಭಾವಿಸುವ ಅಂಥ ನಿರ್ದೇಶನಗಳನ್ನು ನೀಡಬಹುದು ಮತ್ತು ಪ್ರಾಧಿಕಾರವು ಅಂಥ ನಿರ್ದೇಶನಗಳನ್ನು ಪಾಲಿಸತಕ್ಕದ್ದು.

**31. ವರದಿಗಳು.–** (1) ಪ್ರಾಧಿಕಾರವು, ಪ್ರತಿಯೊಂದು ಹಣಕಾಸು ವರ್ಷಕ್ಕೆ ಸಂಬಂಧಿಸಿದಂತೆ ಅದರ ಕಾರ್ಯನಿರ್ವಹಣೆ ಬಗ್ಗೆ ವಾರ್ಷಿಕ ವರದಿಯೊಂದನ್ನು ಸಿದ್ಧಪಡಿಸತಕ್ಕದ್ದು ಮತ್ತು ಇತರ ವರದಿಗಳೊಂದಿಗೆ ಅದನ್ನು ರಾಜ್ಯ ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

(2) ರಾಜ್ಯ ಸರ್ಕಾರವು, ರಾಜ್ಯ ವಿಧಾನ ಮಂಡಲದ ಪ್ರತಿಯೊಂದು ಸದನದ ಮುಂದೆ ವಾರ್ಷಿಕ ವರದಿಗಳನ್ನು ಮಂಡಿಸತ್ತಕ್ಕದ್ದು.

**ಅಧ್ಯಾಯ – V**

**ಸಂಕೀರ್ಣ**

**32. ಪ್ರಾಧಿಕಾರವು ಅದರ ಅಧಿಕಾರ ವ್ಯಾಪ್ತಿಯೊಳಗಿನ ಯಾವುದೇ ಜಮೀನನ್ನು ಮಾರಾಟ ಮಾಡಕೂಡದು.**- ಪ್ರಾಧಿಕಾರವು, ರಾಜ್ಯ ಸರ್ಕಾರದ ಪೂರ್ವಾನುಮೋದನೆ ಪಡೆಯದೆ, ಯಾವುದೇ ಉದ್ದೇಶಕ್ಕಾಗಿ ಮತ್ತು ಯಾವೊಬ್ಬ ವ್ಯಕ್ತಿಗೆ ಅದರ ಅಧಿಕಾರ ವ್ಯಾಪ್ತಿಯಲ್ಲಿನ ಯಾವುದೇ ಜಮೀನನ್ನು ಮಾರಾಟ ಮಾಡತಕ್ಕದ್ದಲ್ಲ.

**33. ಕೆಲವು ವ್ಯಕ್ತಿಗಳು ಲೋಕನೌಕರರಾಗಿರತಕ್ಕದ್ದು.**- ಪ್ರಾಧಿಕಾರದ ಎಲ್ಲ ಸದಸ್ಯರು, ಅಧಿಕಾರಿಗಳು ಮತ್ತು ನೌಕರರನ್ನು, ಅವರು ಈ ಅಧಿನಿಯಮದ ಯಾವುವೇ ಉಪಬಂಧಗಳ ಅನುಸರಣೆಯಲ್ಲಿ ಕಾರ್ಯನಿರ್ವಹಿಸುತ್ತಿರುವಾಗ ಅಥವಾ ಕಾರ್ಯನಿರ್ವಹಿಸುತ್ತಿರುವರೆಂದು ತಾತ್ಪರ್ಯವಾದಾಗ, ಅವರನ್ನು ಭಾರತ ದಂಡ ಸಂಹಿತೆಯ 21ನೇ ಪ್ರಕರಣದ ಅರ್ಥವ್ಯಾಪ್ತಿಯೊಳಗೆ ಲೋಕನೌಕರರು ಎಂಬುದಾಗಿ ಭಾವಿಸತಕ್ಕದ್ದು.

**34. ಈ ಅಧಿನಿಯಮದ ಅಡಿ ಸದ್ಭಾವನೆಯಿಂದ ಕೈಗೊಂಡ ಕ್ರಮಕ್ಕೆ ರಕ್ಷಣೆ.**- ಈ ಅಧಿನಿಯಮದ ಅಡಿಯಲ್ಲಿ ಸದ್ಭಾವನೆಯಿಂದ ಕೈಗೊಂಡ ಅಥವಾ ಕೈಗೊಳ್ಳಲು ಉದ್ದೇಶಿಸಿದ ಯಾವುದೇ ಕೃತ್ಯಕ್ಕಾಗಿ, ಯಾವೊಬ್ಬ ವ್ಯಕ್ತಿಯ ವಿರುದ್ಧ ಯಾವುದೇ ದಾವೆ, ಪ್ರಾಸಿಕ್ಯೂಷನ್ ಅಥವಾ ಇತರೆ ಕಾನೂನು ವ್ಯವಹರಣೆಗಳನ್ನು ಹೂಡತಕ್ಕದ್ದಲ್ಲ.

**35. ಕರ್ತವ್ಯ ನಿರ್ವಹಣೆಯಲ್ಲಿ ಲೋಪ.**- (1) ಈ ಅಧಿನಿಯಮದ ಮೂಲಕ ಅಥವಾ ಅದರ ಅಡಿಯಲ್ಲಿ ವಿಧಿಸಲಾದ ಯಾವುದೇ ಕರ್ತವ್ಯದ ನಿರ್ವಹಣೆಯನ್ನು ಪ್ರಾಧಿಕಾರವು ಮಾಡಿಲ್ಲ ಎಂದು ರಾಜ್ಯ ಸರ್ಕಾರಕ್ಕೆ ಮನವರಿಕೆಯಾದರೆ, ಆ ಕರ್ತವ್ಯದ ನಿರ್ವಹಣೆಗಾಗಿ ಅದು ಒಂದು ಅವಧಿಯನ್ನು ನಿಗದಿಪಡಿಸತಕ್ಕದ್ದು.

(2) ರಾಜ್ಯ ಸರ್ಕಾರದ ಅಭಿಪ್ರಾಯದಲ್ಲಿ, ಪ್ರಾಧಿಕಾರದ ಕರ್ತವ್ಯ ನಿರ್ವಹಣೆಗಾಗಿ ಹಾಗೆ ನಿಗದಿಪಡಿಸಿದ ಅವಧಿಯೊಳಗೆ ಅಂಥ ಕರ್ತವ್ಯ ನಿರ್ವಹಣೆ ಮಾಡುವಲ್ಲಿ ಅದು ವಿಫಲವಾದರೆ ಅಥವಾ ನಿರ್ಲಕ್ಷ್ಯ ತೋರಿದರೆ, 3ನೇ ಪ್ರಕರಣದಲ್ಲಿ ಏನೇ ಇದ್ದಾಗ್ಯೂ, ಪ್ರಾಧಿಕಾರವನ್ನು ರದ್ದುಗೊಳಿಸುವುದು ಮತ್ತು ನಿಯಮಿಸಲಾದ ವಿಧಾನದಲ್ಲಿ ಅದನ್ನು ಪುನಃ ರಚಿಸುವುದು ಸರ್ಕಾರಕ್ಕೆ ಕಾನೂನು ಸಮ್ಮತವಾಗಿರತಕ್ಕದ್ದು.

(3) ಪ್ರಾಧಿಕಾರವನ್ನು ರದ್ದುಪಡಿಸಿದ ತರುವಾಯ ಮತ್ತು ಅದನ್ನು ಪುನಾರಚಿಸುವವರೆಗೆ, ಈ ಅಧಿನಿಯಮದ ಅಡಿಯಲ್ಲಿನ ಪ್ರಾಧಿಕಾರದ ಅಧಿಕಾರಗಳು, ಕರ್ತವ್ಯಗಳು ಮತ್ತು ಪ್ರಕಾರ್ಯಗಳನ್ನು ರಾಜ್ಯ ಸರ್ಕಾರವು ಅಥವಾ ಈ ಉದ್ದೇಶಕ್ಕಾಗಿ ರಾಜ್ಯ ಸರ್ಕಾರವು ನೇಮಕ ಮಾಡಬಹುದಾದ ಅಂಥ ಅಧಿಕಾರಿ ಅಥವಾ ಅಧಿಕಾರಿಗಳು ನಿರ್ವಹಿಸತಕ್ಕದ್ದು.

**36. ಪ್ರಾಧಿಕಾರದ ವಿಘಟನೆ.**- (1) ರಾಜ್ಯ ಸರ್ಕಾರವು, ಅಧಿಸೂಚನೆಯ ಮೂಲಕ, ಆ ಅಧಿಸೂಚನೆಯಲ್ಲಿ ನಿರ್ದಿಷ್ಟಪಡಿಸಬಹುದಾದ ಅಂಥ ದಿನಾಂಕದಿಂದ ಜಾರಿಗೆ ಬರುವಂತೆ, ಪ್ರಾಧಿಕಾರವು ವಿಘಟಿತವಾಗತಕ್ಕದ್ದೆಂದು ಘೋಷಿಸಬಹುದು:

ಪರಂತು, ಅಂಥ ಯಾವುದೇ ಘೋಷಣೆಯನ್ನು, ಆ ಪರಿಣಾಮಕ್ಕೆ ಒಂದು ನಿರ್ಣಯವನ್ನು ರಾಜ್ಯ ವಿಧಾನಮಂಡಲದ ಉಭಯ ಸದನಗಳ ಮುಂದೆ ಮಂಡಿಸಿ ಅವುಗಳು ಅದನ್ನು ಅನುಮೋದಿಸಿದ ಹೊರತು, ರಾಜ್ಯ ಸರ್ಕಾರವು ಮಾಡತಕ್ಕದ್ದಲ್ಲ.

(2) (1)ನೇ ಉಪಪ್ರಕರಣದ ಅಡಿಯಲ್ಲಿನ ಅಧಿಸೂಚನೆಯಲ್ಲಿ ನಿರ್ದಿಷ್ಟಪಡಿಸಿದ ದಿನಾಂಕದಿಂದ ಪರಿಣಾಮಕಾರಿಯಾಗುವಂತೆ,-

(ಎ) ಪ್ರಾಧಿಕಾರದಲ್ಲಿ ನಿಹಿತವಾದ ಮತ್ತು ಅದು ವಸೂಲಿ ಮಾಡಬಹುದಾದ ಎಲ್ಲ ಸ್ವತ್ತುಗಳು, ನಿಧಿಗಳು ಮತ್ತು ಬಾಕಿಗಳು ರಾಜ್ಯ ಸರ್ಕಾರದಲ್ಲಿ ನಿಹಿತವಾಗತಕ್ಕದ್ದು ಮತ್ತು ಅದು ವಸೂಲಿ ಮಾಡಬಹುದಾಗಿರತಕ್ಕದ್ದು.

(ಬಿ) ಪ್ರಾಧಿಕಾರದ ವಿರುದ್ಧ ಜಾರಿ ಮಾಡಬಹುದಾದ ಎಲ್ಲ ಹೊಣೆಗಾರಿಕೆಗಳು, ರಾಜ್ಯ ಸರ್ಕಾರದಲ್ಲಿ ನಿಹಿತವಾದ ಮತ್ತು ಅದರಿಂದ ವಸೂಲಿಯಾದ ಸ್ವತ್ತುಗಳು, ನಿಧಿಗಳು ಮತ್ತು ಬಾಕಿಗಳಷ್ಟರಮಟ್ಟಿಗೆ ರಾಜ್ಯ ಸರ್ಕಾರದ ವಿರುದ್ಧ ಜಾರಿಯಾಗಬಹುದಾಗಿರತಕ್ಕದ್ದು.

**37. ರಾಜ್ಯ ಸರ್ಕಾರದಿಂದ ಆಡಳಿತಾತ್ಮಕ ನಿಯಂತ್ರಣ.**- (1) ಪ್ರಾಧಿಕಾರದ ಎಲ್ಲ ಕಾರ್ಯಚಟುವಟಿಕೆಗಳು ಮತ್ತು ವ್ಯವಹಾರಗಳ ಮೇಲೆ ರಾಜ್ಯ ಸರ್ಕಾರವು ಸಾಮಾನ್ಯ ಆಡಳಿತಾತ್ಮಕ ನಿಯಂತ್ರಣ ಮತ್ತು ಪರಿವೀಕ್ಷಣೆಯನ್ನು ಹೊಂದಿರತಕ್ಕದ್ದು.

(2) ಪ್ರಾಧಿಕಾರದ, ಆಯುಕ್ತರ ಅಥವಾ ಪ್ರಾಧಿಕಾರದ ಅಧೀನದ ಯಾವೊಬ್ಬ ಅಧಿಕಾರಿಯ ಯಾವುವೇ ವ್ಯವಹರಣೆಗಳ ದಾಖಲೆಗಳನ್ನು, ಅಂಥ ವ್ಯವಹರಣೆಗಳ ಸರಿತನ, ಕಾನೂನುಬದ್ಧತೆ ಅಥವಾ ಔಚಿತ್ಯಗಳ ಬಗ್ಗೆ ಸ್ವತ: ಮನವರಿಕೆ ಮಾಡಿಕೊಳ್ಳುವ ಉದ್ದೇಶಕ್ಕಾಗಿ, ರಾಜ್ಯ ಸರ್ಕಾರವು ತರಿಸಿಕೊಳ್ಳಬಹುದು ಅಧಿನಿಯಮದ ಉಪಬಂಧಗಳಿಗನುಸಾರವಾಗಿ ಅದಕ್ಕೆ ಸಂಬಂಧಿಸಿದಂತೆ ಅಂಥ ಆದೇಶವನ್ನು ಹೊರಡಿಸಬಹುದು.

**38. ನಿರ್ದೇಶನಗಳನ್ನು ನೀಡುವುದಕ್ಕೆ ರಾಜ್ಯ ಸರ್ಕಾರದ ಅಧಿಕಾರಗಳು.**- ರಾಜ್ಯ ಸರ್ಕಾರವು ಈ ಅಧಿನಿಯಮದ ಉದ್ದೇಶಗಳನ್ನು ಕಾರ್ಯಗತಗೊಳಿಸುವುದಕ್ಕಾಗಿ ಅದು ಅವಶ್ಯಕ ಅಥವಾ ಮತ್ತು ಸಮಯೋಚಿತವೆಂದು ಅಭಿಪ್ರಾಯಪಡುವಂಥ ನಿರ್ದೇಶನಗಳನ್ನು ಪ್ರಾಧಿಕಾರಕ್ಕೆ ನೀಡಬಹುದು ಮತ್ತು ಅಂಥ ನಿರ್ದೇಶನಗಳನ್ನು ಪಾಲಿಸುವುದು ಪ್ರಾಧಿಕಾರದ ಕರ್ತವ್ಯವಾಗಿರತಕ್ಕದ್ದು.

**39. ತೊಂದರೆಗಳ ನಿವಾರಣೆ.-** ಈ ಅಧಿನಿಯಮದ ಉಪಬಂಧಗಳನ್ನು ಜಾರಿಗೆ ತರುವಲ್ಲಿ, ಯಾವುದೇ ತೊಂದರೆ ಉದ್ಭವಿಸಿದರೆ, ರಾಜ್ಯ ಸರ್ಕಾರವು, ಆ ತೊಂದರೆಯ ನಿವಾರಣೆಗಾಗಿ, ಅದು ಅವಶ್ಯಕ ಮತ್ತು ಸಮಯೋಚಿತವೆಂದು ಅಭಿಪ್ರಾಯಪಡುವಂಥ ಉಪಬಂಧಗಳನ್ನು ಅಧಿಸೂಚನೆಯ ಮೂಲಕ ಈ ಅಧಿನಿಯಮದ ಉಪಬಂಧಗಳಿಗೆ ಅಸಂಗತವಾಗದಂತೆ ರಚಿಸಬಹುದು:

ಪರಂತು, ಈ ಅಧಿನಿಯಮವು ಪ್ರಾರಂಭವಾದ ದಿನಾಂಕದಿಂದ ಎರಡು ವರ್ಷಗಳು ಮುಕ್ತಾಯವಾದ ಮೇಲೆ ಅಂಥ ಅಧಿಸೂಚನೆಯನ್ನು ಹೊರಡಿಸತಕ್ಕದ್ದಲ್ಲ.

**40. ನಿಯಮಗಳ ರಚನಾಧಿಕಾರ.-** (1) ಈ ಅಧಿನಿಯಮದ ಉದ್ದೇಶಗಳನ್ನು ಕಾರ್ಯಗತಗೊಳಿಸುವುದಕ್ಕಾಗಿ ರಾಜ್ಯ ಸರ್ಕಾರವು, ಅಧಿಸೂಚನೆಯ ಪೂರ್ವ ಪ್ರಕಟಣೆಯ ತರುವಾಯ, ನಿಯಮಗಳನ್ನು ರಚಿಸಬಹುದು.

(2) ಈ ಅಧಿನಿಯಮದ ಮೇರೆಗೆ ರಚಿಸಲಾದ ಪ್ರತಿಯೊಂದು ನಿಯಮವನ್ನು ಅಥವಾ ಹೊರಡಿಸಿದ ಅಧಿಸೂಚನೆಯನ್ನು ಅದನ್ನು ರಚಿಸಿದ ಅಥವಾ ಹೊರಡಿಸಿದ ತರುವಾಯ, ಆದಷ್ಟು ಬೇಗನೆ, ರಾಜ್ಯ ವಿಧಾನಮಂಡಲದ ಪ್ರತಿಯೊಂದು ಸದನದ ಮುಂದೆ, ಅದು ಅಧಿವೇಶನದಲ್ಲಿರುವಾಗ, ಒಂದು ಅಧಿವೇಶನದಲ್ಲಿ ಅಥವಾ ಎರಡು ಅಥವಾ ಹೆಚ್ಚಿನ ನಿರಂತರ ಅಧಿವೇಶನಗಳಲ್ಲಿ ಅಡಕವಾಗಬಹುದಾದ ಒಟ್ಟು ಮೂವತ್ತು ದಿನಗಳ ಅವಧಿಯವರೆಗೆ ಮಂಡಿಸತಕ್ಕದ್ದು ಮತ್ತು ಮೇಲೆ ಹೇಳಿದ ಅಧಿವೇಶನಗಳ ಅಥವಾ ನಿರಂತರ ಅಧಿವೇಶನಗಳ ನಿಕಟ ತರುವಾಯದ ಅಧಿವೇಶನದ ಮುಕ್ತಾಯಕ್ಕೆ ಮುಂಚೆ ಆ ನಿಯಮದಲ್ಲಿ ಯಾವುದೇ ಮಾರ್ಪಾಟನ್ನು ಮಾಡಬೇಕೆಂದು ಎರಡೂ ಸದನಗಳೂ ಒಪ್ಪಿದರೆ ಅಥವಾ ಆ ನಿಯಮವನ್ನು ಮಾಡಕೂಡದೆಂದು ಎರಡೂ ಸದನಗಳೂ ಒಪ್ಪಿದರೆ ಆ ನಿಯಮದ ಆ ಮಾರ್ಪಾಟು ಅಥವಾ ರದ್ದತಿಯು ಅದನ್ನು ಅಧಿಸೂಚಿಸಿದ ದಿನಾಂಕದಿಂದ ಸಂದರ್ಭಾನುಸಾರ ಅಂಥ ಮಾರ್ಪಾಟಾದ ರೂಪದಲ್ಲಿ ಮಾತ್ರ ಪರಿಣಾಮಕಾರಿಯಾಗಿರತಕ್ಕದ್ದು ಅಥವಾ ಯಾವುದೇ ಪರಿಣಾಮ ಹೊಂದಿರತಕ್ಕದ್ದಲ್ಲ; ಆದಾಗ್ಯೂ ಅಂಥ ಯಾವುದೇ ಮಾರ್ಪಾಟು ಅಥವಾ ರದ್ದತಿಯು ಆ ನಿಯಮದ ಮೇರೆಗೆ ಹಿಂದೆ ಮಾಡಿದ ಯಾವುದೇ ಕೃತ್ಯದ ಮಾನ್ಯತೆಗೆ ಬಾಧಕವಾಗತಕ್ಕದ್ದಲ್ಲ.

**41. ವಿನಿಯಮಗಳ ರಚನಾಧಿಕಾರ.-** ಪ್ರಾಧಿಕಾರವು, ಈ ಅಧಿನಿಯಮದ ಉಪಬಂಧಗಳಿಗೆ ಮತ್ತು 40ನೇ ಪ್ರಕರಣದ ಅಡಿಯಲ್ಲಿ ಮಾಡಲಾದ ನಿಯಮಗಳಿಗೆ ಒಳಪಟ್ಟು ಮತ್ತು ರಾಜ್ಯ ಸರ್ಕಾರದ ಪೂರ್ವ ಮಂಜೂರಾತಿಯೊಂದಿಗೆ, ಈ ಅಧಿನಿಯಮದ ಉದ್ದೇಶಗಳನ್ನು ಕಾರ್ಯಗತಗೊಳಿಸುವುದಕ್ಕೆ ಅಧಿಸೂಚನೆಯ ಮೂಲಕ ವಿನಿಯಮಗಳನ್ನು ರಚಿಸಬಹುದು.

**ಅನುಸೂಚಿ**

(2ನೇ ಪ್ರಕರಣದ (ಜಿ) ಖಂಡ ನೋಡಿ)

ಬನವಾಸಿಯಲ್ಲಿ ಪಾರಂಪರಿಕ ತಾಣಗಳು ಮತ್ತು ಸ್ಮಾರಕಗಳು

1. ಸಂಪೂರ್ಣ ಮಧುಕೇಶ್ವರ ದೇವಾಲಯ;
2. ಆಡಿ ಮಧುಕೇಶ್ವರ ದೇವಾಲಯ;
3. ಕೊಪ್ಪಳ ದುರ್ಗಮ್ಮ (ಗ್ರಾಮ ದೇವಿ);
4. ಕೊಪ್ಪಳ ರಾಮೇಶ್ವರ;
5. ನೀಲಕಂಠೇಶ್ವರ;
6. ಕದಂಬೇಶ್ವರ;
7. ಸ್ಥಿತಿ ಕಾಂತೇಶ್ವರ;
8. ರಥದ ರಕ್ಷಣಾ ಮಂದಿರ;
9. ಮಹಾ ಕಂದನ ರಥ, 1608ರಲ್ಲಿ ಸೋಂದೆ ರಾಮಚಂದ್ರನಾಯಕ ಅವರು ನೀಡಿದ ಕೊಡುಗೆ;
10. ತೀರು ತಿರುಮಲ ದೇವರು;
11. ಪಂಚಬ್ರಹ್ಮ;
12. ಪೇಟೆ ವೆಂಕಟರಮಣ ದೇವರು;
13. ಹನುಮಂತನ ದೇವಾಲಯ;
14. ಬನಶಂಕರಿ (ಗ್ರಾಮ ದೇವಿ);
15. ಸುಂದರೇಶ್ವರ;
16. ಪ್ರಭು ದೇವಾಲಯ;
17. ಅಲ್ಲಮ ಪ್ರಭು;
18. ಚವುಡಿ ಗಣಪತಿ (ಮಹಾನವಮಿ);
19. ಬಯಲು ಬಸವಣ್ಣ;
20. ಹಕ್ಕಲು ಮಾರಿಕಾಂಬ (ಗ್ರಾಮ ದೇವಿ); ಮತ್ತು
21. ದೇವಾಲಯದ ಮುಂದೆ ವರದಾ ನದಿಗೆ ಇರುವ ಮೆಟ್ಟಿಲುಗಳು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

**ಕೆ.ದ್ವಾರಕನಾಥ್ ಬಾಬು**
ಸರ್ಕಾರದ ಕಾರ್ಯದರ್ಶಿ,
ಸಂಸದೀಯ ವ್ಯವಹಾರಗಳ ಇಲಾಖೆ

**ಅಧಿಸೂಚನೆ**

**ಸಂಖ್ಯೆ: ಕಂಇ 148 ಆರ್‌ಇಹೆಚ್ 2015(ಭಾಗ-1), ಬೆಂಗಳೂರು, ದಿನಾಂಕ: 13-08-2018**

ಬನವಾಸಿ ಅಭಿವೃದ್ಧಿ ಪ್ರಾಧಿಕಾರ ಅಧಿನಿಯಮ, 2018 (2018ರ ಕರ್ನಾಟಕ ಅಧಿನಿಯಮ ಸಂಖ್ಯೆ: 8) ರ 1ನೇ ಪ್ರಕರಣ (3)ನೇ ಉಪ ಪ್ರಕರಣದಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಕರ್ನಾಟಕ ಸರ್ಕಾರವು ಈ ಮೂಲಕ ಸದರಿ ಅಧಿನಿಯಮವು ದಿನಾಂಕ: 15.08.2018ರಿಂದ ಜಾರಿಗೆ ಬರತಕ್ಕದ್ದೆಂದು ಗೊತ್ತುಪಡಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

**ಕೆ.ಆರ್. ರವಿಕುಮಾರ್**
ಸರ್ಕಾರದ ಅಧೀನ ಕಾರ್ಯದರ್ಶಿ-1(ಪ್ರ),
(ಪುನರ್ವಸತಿ ಮತ್ತು ಪುನರ್‌ನಿರ್ಮಾಣ)
ಕಂದಾಯ ಇಲಾಖೆ.

## 2025 ರ ಕರ್ನಾಟಕ ಅಧಿನಿಯಮ ಸಂಖ್ಯೆ: 54

(2025ರ ಸೆಪ್ಟೆಂಬರ್ ತಿಂಗಳ 10ನೇ ದಿನಾಂಕದಂದು ಕರ್ನಾಟಕ ರಾಜ್ಯಪತ್ರದ ವಿಶೇಷ ಸಂಚಿಕೆಯಲ್ಲಿ ಮೊದಲು ಪ್ರಕಟವಾಗಿದೆ)

## ಬನವಾಸಿ ಅಭಿವೃದ್ಧಿ ಪ್ರಾಧಿಕಾರ (ತಿದ್ದುಪಡಿ) ಅಧಿನಿಯಮ, 2025

(2025ರ ಸೆಪ್ಟೆಂಬರ್ ತಿಂಗಳ 10ನೇ ದಿನಾಂಕದಂದು ರಾಜ್ಯ ಪಾಲರಿಂದ ಒಪ್ಪಿಗೆಯನ್ನು ಪಡೆಯಲಾಗಿದೆ)

ಬನವಾಸಿ ಅಭಿವೃದ್ಧಿ ಪ್ರಾಧಿಕಾರ ಅಧಿನಿಯಮ 2018ನ್ನು ತಿದ್ದುಪಡಿ ಮಾಡಲು ಒಂದು ಅಧಿನಿಯಮ.

ಇಲ್ಲಿ ಇನ್ನುಮುಂದೆ ಕಂಡುಬರುವ ಉದ್ದೇಶಗಳಿಗಾಗಿ ಬನವಾಸಿ ಅಭಿವೃದ್ಧಿ ಪ್ರಾಧಿಕಾರ ಅಧಿನಿಯಮ 2018 (2018ರ ಕರ್ನಾಟಕ ಅಧಿನಿಯಮ ಸಂಖ್ಯೆ 08)ನ್ನು, ತಿದ್ದುಪಡಿ ಮಾಡುವುದು ಯುಕ್ತವಾಗಿರುವುದರಿಂದ;

ಇದು ಭಾರತ ಗಣರಾಜ್ಯದ ಎಪ್ಪತ್ತಾರನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನ ಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ:-

**1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ.-** (1) ಈ ಅಧಿನಿಯಮವನ್ನು ಬನವಾಸಿ ಅಭಿವೃದ್ಧಿ ಪ್ರಾಧಿಕಾರ (ತಿದ್ದುಪಡಿ) ಅಧಿನಿಯಮ**,** 2025 ಎಂದು ಕರೆಯತಕ್ಕದ್ದು.

(2) ಇದು ಈ ಕೂಡಲೇ ಜಾರಿಗೆ ಬರತಕ್ಕದ್ದು.

**2. ಪ್ರಕರಣ 3ರ ತಿದ್ದುಪಡಿ.-** ಬನವಾಸಿ ಅಭಿವೃದ್ಧಿ ಪ್ರಾಧಿಕಾರ ಅಧಿನಿಯಮ, 2018 (2018ರ ಕರ್ನಾಟಕ ಅಧಿನಿಯಮ ಸಂಖ್ಯೆ 08)ರ 3ನೇ ಪ್ರಕರಣದ, (4)ನೇ ಉಪಪ್ರಕರಣದಲ್ಲಿರುವ, (ಎ) ಖಂಡದ ಬದಲಿಗೆ ಈ ಮುಂದಿನದನ್ನು ಪ್ರತಿಯೋಜಿಸತಕ್ಕದ್ದು**,** ಎಂದರೆ:-

**"**(ಎ) ಮುಖ್ಯಮಂತ್ರಿ ಅಥವಾ ಕಂದಾಯ ಮಂತ್ರಿ ಅಥವಾ ಮುಖ್ಯಮಂತ್ರಿಯವರು ಆಯ್ಕೆ ಮಾಡಿದ ಯಾರೇ ಇತರ ಮಂತ್ರಿ - ಪದನಿಮಿತ್ತ ಅಧ್ಯಕ್ಷರು ".

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

**ಜಿ. ಶ್ರೀಧರ್**
ಸರ್ಕಾರದ ಕಾರ್ಯದರ್ಶಿ,
ಸಂಸದೀಯ ವ್ಯವಹಾರಗಳು ಮತ್ತು
ಶಾಸನ ರಚನೆ ಇಲಾಖೆ.